ವಿಜಯಪುರ | ಸಂಪುಟ 01 | ಸಂಚಿಕೆ 235 | ಪುಟ 4 | ₹ 3.00

https://udayarashminews.com

udayarashmi 7026028778

# ಉದಯ ರಶ್ಮಿ

ಜನಪರ-ಜೀವಪರ

ಸಂಪಾದಕ : ಇಂದುಶೇಖರ ಮಣೂರ

ಕನ್ನಡ ದಿನಪತ್ರಿಕೆ

editor.udayarashmi@gmail.com Title Code: KARKAN28047 ಶುಕ್ರವಾರ, ನವೆಂಬರ್ 10, 2023

"ನಮ್ಮಲ್ಲಿ ಎಲ್ಲ ಉದ್ಯಮಗಳೂ ಬೆಂಗಳೂರಿನಲ್ಲಿ ಕೇಂದ್ರೀಕೃತಗೊಂಡಿವೆ. ಆದರೆ ಬಿಯಾಂಡ್ ಬೆಂಗಳೂರು ಉಪಕ್ರಮದಡಿ ರಾಜಧಾನಿಯ ಆಚೆಗೂ ಬಂಡವಾಳ ಹೂಡಿಕೆ ಮತ್ತು ಕೈಗಾರಿಕೆಗಳ ಸ್ಥಾಪನೆಗೆ ಹೇರಳ ಅವಕಾಶಗಳಿವೆ.

ಉದಯರಶ್ಮಿ ಡಿಜಿಟಲ್



– ಎಂ. ಬಿ. ಪಾಟೀಲ
ಭಾರೀ ಮತ್ತು ಮಧ್ಯಮ ಕೈಗಾರಿಕಾ ಸಚಿವರು

ಡಿ.15ರ ವರೆಗೆ 10 ದಿನ ಅಧಿವೇಶನ ನಡೆಸಲು ತಿರ್ಮಾನ | ಕಾನೂನು ಮತ್ತು ಸಂಸದೀಯ ಸಚಿವ ಎಚ್.ಕೆ. ಪಾಟೀಲ ಹೇಳಿಕೆ

# ಬೆಳಗಾವಿಯಲ್ಲಿ ಡಿ.4 ರಿಂದ ಚಳಿಗಾಲದ ಅಧಿವೇಶನ

ಬೆಂಗಳೂರು: ಬೆಳಗಾವಿಯ ಸುವರ್ಣ ಸೌಧದಲ್ಲಿ ಡಿಸೆಂಬರ್ 4 ರಿಂದ 15 ರವರೆಗೆ 10 ದಿನಗಳ ಕಾಲ ಚಳಿಗಾಲದ ಅಧಿವೇಶನ ನಡೆಸಲು ಗುರುವಾರ ನಡೆದ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ತಿರ್ಮಾನಿಸಲಾಗಿದೆ.

ಗುರುವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಕಾನೂನು ಮತ್ತು ಸಂಸದೀಯ ಸಚಿವ ಎಚ್ ಕೆ ಪಾಟೀಲ್ ಅವರು, ಬೆಳಗಾವಿಯಲ್ಲಿ ಡಿಸೆಂಬರ್ 4 ರಿಂದ ಡಿಸೆಂಬರ್ 15ರ ವರೆಗೆ 10 ದಿನಗಳ ಕಾಲ ವಿಧಾನ ಮಂಡಲ ಅಧಿವೇಶನ ನಡೆಸಲು ಸಂಪುಟ ಸಭೆ ನಿರ್ಧ-ರಿಸಿದೆ ಎಂದರು.



ಸಚಿವ ಸಂಪುಟ ಸಭೆಯಲ್ಲಿ ಬರಗಾಲದ ಬಗ್ಗೆಯೂ ವಿಸ್ತೃತವಾಗಿ ಚರ್ಚೆ ಮಾಡಿದ್ದೇವೆ. ಬರ ಪರಿಹಾರಕ್ಕಾಗಿ ಕೇಂದ್ರಕ್ಕೆ ಮನವಿ ಮಾಡಿದ್ದೇವೆ, ಆದರೆ ಇದುವರೆಗೂ ಕೇಂದ್ರ ಸರ್ಕಾರ ನಯಾ ಪೈಸೆ ಬಿಡುಗಡೆ ಮಾಡಿಲ್ಲ. ಇವತ್ತಿನ ಸಭೆಯಲ್ಲಿ ಕೇಂದ್ರ ಸರ್ಕಾರದ ನಡೆ ವಿರುದ್ಧ ಖಂಡನೆ ವ್ಯಕ್ತ ಪಡಿಸಿದ್ದೇವೆ ಎಂದರು.

ಜಿಲ್ಲಾ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ಬರಗಾಲ ಪರಿಹಾರದ ಕೆಲಸಗಳು ಶುರುವಾಗಬೇಕು. ಈಗಾಗಲೇ 700–800 ಕೋಟಿ ರೂಪಾಯಿ ಜಿಲ್ಲಾಧಿಕಾರಿಗಳ ಅಕೌಂಟ್ ನಲ್ಲಿದೆ, ಬರಗಾಲ ನಿರ್ವಹಣೆಗೆ ಯಾವುದೇ ಸಮಸ್ಯೆ ಆಗದಂತೆ ನೋಡಿಕೊಳ್ಳಲು ಸಿಎಂ ಸಚಿವರಿಗೆ ಸೂಚನೆ ನೀಡಿದ್ದಾರೆ ಎಂದು ಹೇಳಿದರು.

ಕನಕಪುರ ತಾಲೂಕಿನ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಮೇಲ್ದರ್ಜೆಗೆ ಏರಿಸಲು 10.38 ಕೋಟಿ ರೂ. ಬಿಡುಗಡೆ ಮಾಡಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ. ಇನ್ಫೋಸಿಸ್ ಕಂಪನಿ ವತಿಯಿಂದ ಸಿಎಸ್‌ಆರ್ ಫಂಡ್ ನಿಂದ ಕನಕಪುರದ ತಾಯಿ ಆಸ್ಪತ್ರೆ ನಿರ್ಮಿಸಲಾಗುವುದು ಎಂದು ಎಚ್ ಕೆ ಪಾಟೀಲ್ ತಿಳಿಸಿದರು.

ಇನ್ನು ವಾಯುವ್ಯ ಸಾರಿಗೆಯಲ್ಲಿ16.20 ಕೋಟಿ ವೆಚ್ಚದಲ್ಲಿ 45 ಬಸ್ ಗಳ ಖರೀದಿಗೆ ಸಚಿವ ಸಂಪುಟ ಅನುಮೋದನೆ ನೀಡಿದ್ದು, ಹುಬ್ಬಳ್ಳಿ ಬಿ.ಆರ್.ಟಿಗೆ 45 ಕೋಟಿ ರೂ. ವೆಚ್ಚದಲ್ಲಿ 100 ಬಸ್ ಖರೀದಿಗೆ ಸಚಿವ ಸಂಪುಟ ಸಭೆಯಲ್ಲಿ ಒಪ್ಪಿಗೆ ಸೂಚಿಸಲಾಗಿದೆ ಎಂದರು.

ಬೆಳಗಾವಿ ಅಧಿವೇಶನದಲ್ಲೇ ಸದಾಶಿವ ಆಯೋಗ ವರದಿ ಮಂಡಿಸಲು ನಿರ್ಧಾರ

## ಒಳಮೀಸಲಾತಿ ಕಲ್ಪಿಸುವಂತೆ ಸಿಎಂಗೆ ಮನವಿ :ಜಿ.ಪರಮೇಶ್ವರ

ಉದಯರಶ್ಮಿ ನ್ಯೂಸ್



ಬೆಂಗಳೂರು: ಬೆಳಗಾವಿಯ ಚಳಿಗಾಲದ ಅಧಿವೇಶನದಲ್ಲಿಯೇ ಎಜೆ ಸದಾಶಿವ ಆಯೋಗದ ವರದಿ ಮಂಡಿಸಿ ಒಳ ಮೀಸಲಾತಿ ಕಲ್ಪಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವ-ರಿಗೆ ಮನವಿ ಸಲ್ಲಿಸಲಾಗಿದೆ ಎಂದು ಗೃಹ ಸಚಿವ ಡಾ. ಜಿ ಪರಮೇಶ್ವರ ಮಂಗಳವಾರ ತಿಳಿಸಿದ್ದಾರೆ.

ಒಳ ಮೀಸಲಾತಿ ಸಂಬಂಧ ಸದಾಶಿವ ಆಯೋಗದ ವರದಿ ಜಾರಿ ಕುರಿತಂತೆ ಪರಿಶಿಷ್ಟ ಜಾತಿಗೆ ಸೇರಿದ ಸಚಿವರು ಮತ್ತು ಶಾಸಕರು ನಡೆಸಿದ ಸಭೆ ಬಳಿಕ ಅವರು ಮಾತನಾಡಿದರು.

'ಚುನಾವಣೆ ಸಂದರ್ಭದಲ್ಲಿ ಒಳ ಮೀಸಲಾತಿ ಕುರಿತು ಚಿತ್ರದುರ್ಗ ನಗರದಲ್ಲಿ ಎಸ್‌ಸಿ–ಎಸ್‌ಟಿ ಸಮಾವೇಶ ನಡೆಸಲಾಗಿತ್ತು. ಆಗ ಹತ್ತು ಹಲವು ಘೋಷಣೆಗಳನ್ನು ಮಾಡಿದ್ದೆವು. ಅದರಲ್ಲಿ ಸದಾಶಿವ ಆಯೋಗದ ವರದಿಯನ್ನು ಮೊದಲ ಅಧಿವೇಶನದಲ್ಲಿಯೇ ಸದನದ ಮುಂದಿಡಲಾಗುವುದು ಎಂದು ಭರವಸೆ ನೀಡಲಾಯಿತು. ಆದ-'ರೆ, ಕಾರಣಾಂತರಗಳಿಂದ ಅದು ಸಾಧ್ಯವಾಗಿಲ್ಲ' ಎಂದು ಹೇಳಿದರು.

ಬೆಳಗಾವಿಯಲ್ಲಿ ನಡೆಯಲಿರುವ ಚಳಿಗಾಲದ ಅಧಿವೇಶನದಲ್ಲಿ ಸದಾಶಿವ ಆಯೋಗದ ವರದಿಯನ್ನು ಸದನದ ಮುಂದೆ ಮಂಡಿಸುವಂತೆ ಸಿದ್ದರಾಮಯ್ಯ ಅವರಿಗೆ ಮನವಿ ಮಾಡಲಾಗಿದೆ ಎಂದು ಪರಮೇಶ್ವರ ತಿಳಿಸಿದರು.

ಸಮಾಜ ಕಲ್ಯಾಣ ಸಚಿವ ಡಾ. ಎಚ್‌ಸಿ ಮಹದೇವಪ್ಪ, ಆಹಾರ ಸಚಿವ ಕೆಎಚ್ ಮುನಿಯಪ್ಪ, ಆರ್‌ಡಿಪಿಆರ್ ಸಚಿವ ಪ್ರಿಯಾಂಕ್ ಖರ್ಗೆ ಮತ್ತು ನಮ್ಮಲ್ಲಿ ಕೆಲವರು ಈ ವಿಷಯವನ್ನು ಸಿಎಂ ಗಮನಕ್ಕೆ ತಂದಿದ್ದೇವೆ. ಈ ಬಗ್ಗೆ ಸಮಾಜದ ಮುಖಂಡರ ಜತೆ ಚರ್ಚಿಸಿ ತೀರ್ಮಾನ ಕೈಗೊಳ್ಳಲಾಗುವುದು ಎಂದು ಸಿಎಂ ಭರವಸೆ ನೀಡಿದ್ದಾರೆ ಎಂದು ತಿಳಿಸಿದರು.

ನ್ಯಾ. ಸದಾಶಿವ ಆಯೋಗದ ವರದಿಯಂತೆ ಒಳ ಮೀಸಲಾತಿ ವಿಚಾರವಾಗಿ ತೀವ್ರ ಸ್ವರೂಪದ ಹೋರಾಟ ನಡೆಸಿ, ಸರ್ಕಾರದ ಮೇಲೆ ಒತ್ತಡ ಹೇರಬೇಕು ಎಂದು ಮಾದಿಗ ಸಮುದಾಯದ ಮುಖಂಡರಿಗೆ ಆಹಾರ ಇಲಾಖೆ ಸಚಿವ ಕೆಹೆಚ್ ಮುನಿಯಪ್ಪ ಸೋಮವಾರ ಕರೆ ನೀಡಿದ್ದಾರೆ.

ಸದಾಶಿವ ಆಯೋಗದ ಶಿಫಾರಸು ಜಾರಿಗಾಗಿ ತೀವ್ರ ಆಂದೋಲನದ ಅಗತ್ಯವಿದೆ. ನಿಮ್ಮ ಸ್ಥಳೀಯ ಶಾಸಕರ ಮನೆಗೆ ಮುತ್ತಿಗೆ ಹಾಕಿ. ಅವರಿಗೆ ಕಾರ್ಯಕ್ರಮಗಳನ್ನು ನಡೆಸಲು ಬಿಡಬೇಡಿ. ಸಚಿವನಾಗಿದ್ದುಕೊಂಡೇ ನಾನು ನಿಮಗೆ ಈ ರೀತಿ ಹೇಳುತ್ತಿದ್ದೇನೆ. ಹೀಗೆ ಹೇಳುವ ಸಂದರ್ಭ ಬಂದಿದೆ ಎಂದು ಕರ್ನಾಟಕ ಆದಿಜಾಂಬವ ಸಾಂಸ್ಕೃತಿಕ ಸಮಿತಿಯ ಮುಖಂಡರ ಸಭೆಯಲ್ಲಿ ಮುನಿಯಪ್ಪ ಅವರು ತಮ್ಮ ಭಾಷಣದಲ್ಲಿ ಹೇಳಿದ್ದಾರೆ.

## ಐ.ಸಿ.ಸಿ ಸಭೆಗೆ ಗೈರಾದ ಶಾಸಕರ ವಿರುದ್ಧ ರೈತರ ಆಕ್ರೋಶ

ಉದಯರಶ್ಮಿ ನ್ಯೂಸ್

ಹೂವಿನಹಿಪ್ಪರಗಿ: ಮುಂಗಾರು ಹಾಗೂ ಹಿಂಗಾರು ಮಳೆ ನಿರೀಕ್ಷಿತ ಮಟ್ಟದಲ್ಲಿ ಬಾರದ ಕಾರಣ ಬೆಳೆಗಳು ಒಣಗಿಹೋಗಿದ್ದು ರೈತರು ಕಂಗಾಲಾಗಿದ್ದಾರೆ ಎಂದು ಅಖಂಡ ಕರ್ನಾಟಕ ರೈತ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ ಹೇಳಿದರು ಹೂವಿನಹಿಪ್ಪರಗಿಯಲ್ಲಿ ಬುಧವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮಂಗಳವಾರ ನಡೆದ ಆಲಮಟ್ಟಿ ಕೃಷ್ಣಾ ಭಾಗ್ಯ ಜಲನಿಗಮದ ವ್ಯವಸ್ಥಾಪಕ ನಿರ್ದೇಶಕರ ಕಚೇರಿಯಲ್ಲಿ ನೀರಾವರಿ ಸಲಹಾ ಸಮಿತಿ ಸಭೆಗೆ ಜಿಲ್ಲೆಯ 8 ಶಾಸಕರ ಪೈಕಿ ನಾಲ್ಕು ಜನ ಶಾಸಕರು ಮಾತ್ರ ಭಾಗವಹಿಸಿರುವುದು ನಾಚಿಕೆಗೇಡಿನ ಸಂಗತಿಯಾಗಿದೆ. ಜಿಲ್ಲೆಯ ಉಸ್ತುವಾರಿ ಸಚಿವರು, ಬಸವನಬಾಗೇವಾಡಿ ಶಾಸಕರು ಹಾಗೂ ಜವಳಿ ಕಬ್ಬು ಅಭಿವೃದ್ಧಿ ಸಚಿವರು, ದೇವರ ಹಿಪ್ಪರಗಿಯ ಶಾಸಕ ರಾಜುಗೌಡ ಪಾಟೀಲರು ನೀರಾವರಿ ಸಲಹಾ ಸಮಿತಿ ಸಭೆಗೆ ಗೈರಾಗಿದ್ದು ತಮಗೆ ಶೋಭೆ ತರುವಂತದಲ್ಲ, ಇದನ್ನು ರೈತ ಸಂಘ ಖಂಡಿಸುತ್ತದೆ. ಆಯ್.ಸಿ.ಸಿ ಸಭೆ ಮಹತ್ವದ ಸಭೆಯಾಗಿರುವುದ-



ರಿಂದ ಕಡ್ಡಾಯವಾಗಿ ಜಿಲ್ಲೆಯ ಎಲ್ಲಾ ಶಾಸಕರುಗಳು ಹಾಜರಿರಬೇಕು. ರೈತರ ಬೇಡಿಕೆಯಂತೆ ಅವರಿಗೆ ಅನಕೂಲವಾಗುವ ರೀತಿ ನಿರ್ಣಯ ಕೈಗೊಳ್ಳದಿದ್ದರೆ ಅದನ್ನು ಪ್ರಶ್ನಿಸಲು ಕಡ್ಡಾಯವಾಗಿ ಜಿಲ್ಲೆಯ ಸಚಿವರು ಶಾಸಕರು ಉಪಸ್ಥಿತರಿರಬೇಕು. ಒಂದು ವೇಳೆ ಗೈರಾದಲ್ಲಿ ಅವರು ಮಾಡಿದ್ದೇ ಮಾರ್ಗವಾಗುತ್ತದೆ ಎಂದರು. ರಾಯಚೂರ, ಗುಲಬುರ್ಗಾ, ಯಾದಗಿರ ಜಿಲ್ಲೆ ಸೇರಿದಂತೆ ಇನ್ನುಳಿದ ಜಿಲ್ಲೆಗಳ ಜನಪ್ರತಿನಿಧಿಗಳು ಕಡ್ಡಾಯವಾಗಿ ಆ ಭಾಗದ ರೈತರೊಂದಿಗೆ ಸಭೆಗೆ ಹಾಜರಾಗಿ ತಮ್ಮ ಭಾಗದ ರೈತ-ರಿಗೆ ನ್ಯಾಯ ದೊರಕಿಸಿ ಕೊಡುತ್ತಾರೆ ಆದರೆ ನಮ್ಮ ಜಿಲ್ಲೆಯ ಯಾವೊಬ್ಬ ಶಾಸಕರು ಕೂಡ ಧ್ವನಿ ಎತ್ತುವದಿಲ್ಲ ಇದರಿಂದ ನಮ್ಮ ಜಿಲ್ಲೆಯ ರೈತ-ರಿಗೆ ವಂಚನೆಯಾಗುತ್ತಿದೆ ಎಂದರು. ನೀರಾವರಿ ಸಲಹಾ ಸಮಿತಿ ಸಭೆ ನಡೆಯುವ ಸ್ಥಳದಿಂದ ಒಂದು ಕೀಲೋಮಿಟರ್ ವರೆಗೆ ರೈತರನ್ನು ದೂರವಿಟ್ಟು ಯಾವ ಪುರುಷಾಥ-'ರ್ಕ್ಕೆ ಸಭೆ ನಡೆಸಲಾಗುತ್ತದೆ ಎಂದು ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.


ಪ್ರತಿ ಬಾರಿ ಸಭೆ ನಡೆಸುವಾಗ ಇದೆ ರೀತಿ ರೈತರನ್ನು ನಡೆಸಿಕೊಳ್ಳಲಾಗುತ್ತಿದೆ. ರೈತರಿಗೆ ಹಾಗೂ ಹೋರಾಟಗಾರ-ರಿಗೆ ಹೆದರಿ ನೂರಾರು ಪೋಲಿಸ ಭದ್ರತೆಯಲ್ಲಿ ಸಭೆ ನಡೆಸಲಾಗುತ್ತಿದೆ. ಇನ್ನು ಮುಂದೆ ರೈತರನ್ನು ಬಿಟ್ಟು ಸಭೆ ನಡೆಸಿದರೆ ಉಗ್ರ ಹೋರಾಟ ನಡೆಸಬೇಕಾಗುತ್ತದೆ ಎಂದು ಎಚ್ಚ-ರಿಸಿದರು.

ಈ ಸಂದರ್ಭದಲ್ಲಿ ರೈತ ಮುಖಂಡರಾದ ಹಣಮಂತರಾಯ ಗುಣಕಿ, ಮೋಹನಗೌಡ ಪಾಟೀಲ, ಪಿಕೆಪಿಎಸ್ ಅಧ್ಯಕ್ಷ ಪಿ ಜಿ ಗೋಟೇದ, ಬಸವರಾಜಗೌಡ ಪಾಟೀಲ, ವಿಠ್ಠಲ ಬಿರಾದಾರ, ಬಸವನಗೌಡ ಬಿರಾದಾರ, ಸಂಗನಗೌಡ ಬಿರಾದಾರ, ನಾಗಪ್ಪ ಅಳಗುಂಡಗಿ, ಕುಮಾರಗೌಡ ಪಾಟೀಲ, ಹಣಮಂತ ಸಾಸನೂರ, ರಾಜು ಕುಂಟೋಜಿ, ರಮೇಶ ಕೋರಿ ಇದ್ದರು.

### ರಾಜ ನುಡಿ

ಗಂಡು ಮನೆಯ ಮಿದುಳಾದರೆ, ಹೆಣ್ಣು ಆ ಮನೆಯ ಹೃದಯ. ಮಗು ಆ ಮನೆಯ ನಾಡಿ ಮಿಡಿತ. ಮನೆ ಎಂಬುದು ಜೀವಂತ ದೇಹ ಎಂದುಕೊಂಡಾಗ ಪರಸ್ಪರ ಪ್ರೀತಿ, ವಿಶ್ವಾಸ ಮೂಡಿ ಮನೆ ಮಂತ್ರಾಲಯವಾಗುತ್ತದೆ.

–ಡಾ. ರಾಜಶೇಖರ ನಾಗೂರ



### ವಚನ ಚಿಂತನ 231

ಅಂಗ ಲಿಂಗ ಸಂಗಮ ಸುಖ

*ಅಂಗಲಿಂಗ ಸಂಗವು ಲಿಂಗದಲ್ಲಿ ಆಯತವಯ್ಯಾ.*
*ನಿಮಿಷ ಕರಸ್ಥಲವನಗಲಿದಡೆ ಭಂಗವಯ್ಯಾ.*
*ಕಂಗಳೆ ಕರುವಾಗಿ, ಲಿಂಗವೆ ಗೂಡಾಗಿ,*
*ಲಿಂಗನಿಷ್ಪತ್ತಿಯಲಿಪ್ಪ*
*ಕೂಡಲಚೆನ್ನಸಂಗಾ ನಿಮ್ಮ ಶರಣ.*
*– ಚೆನ್ನಬಸವಣ್ಣನವರು*

ಇಷ್ಟಲಿಂಗಪೂಜೆಯಲ್ಲಿ ಒಡಮೂಡುವ ಅನುಭಾವದ ಉತ್ತುಂಗಸ್ಥಿತಿಯ ಕುರಿತು ಚೆನ್ನಬಸವಣ್ಣನವರು ಇಲ್ಲಿ ವಿವರಿಸಿದ್ದಾರೆ. ಇಷ್ಟಲಿಂಗಪೂಜೆಯಲ್ಲಿ ನಿರತನಾದ ಭಕ್ತನಿಗೆ ಪ್ರಾರಂಭದಲ್ಲಿಯ ಅಂಗ ಮತ್ತು ಲಿಂಗಭಾವಗಳು ಅಳಿದು ಲಿಂಗಾಂಗ ಸಾಮರಸ್ಯ ಹೊರಹೊಮ್ಮುತ್ತದೆ, ಆಗ ಅಂಗಕ್ಕೆ ನಿರಂತರವಾಗಿ ಚೈತನ್ಯವು ಪ್ರವಹಿಸುತ್ತಿರುತ್ತದೆ. ಈ ಚೈತನ್ಯಶಕ್ತಿಯನ್ನು ಸ್ವೀಕರಿಸುವ ಅಂಗಕ್ಕೆ ಒಂದು ಕ್ಷಣ ಭಂಗ ಬಂದರೂ ಶರಣನು ಸೈರಿಸನು. (ನಿಮಿಷ ಕರಸ್ಥಲವನಗಲಿದಡೆ ಭಂಗವಯ್ಯಾ) ಲಿಂಗದಿಂದ ಹೊರಹೊಮ್ಮುವ ಚೈತನ್ಯವು ಹಾಗೂ ಅದನ್ನು ಸ್ವೀಕರಿಸುವ ಅಂಗದ ಸ್ಥಿತಿಯನ್ನು ಒಂದು ಒಳ್ಳೆಯ ಹೋಲಿಕೆಯೊಂದಿಗೆ ಚೆನ್ನಬಸವಣ್ಣನವರು ನಮಗೆ ಮನದಟ್ಟುಮಾಡಿದ್ದಾರೆ. ಹೇಗೆ ಹಸಿದು ತಾಯ ಹಂಬಲಿಸಿದ ಆಕಳಕರು ತನ್ನ ತಾಯಿಯ ಕೆಚ್ಚಲಿಗೆ ಬಾಯಿಹಾಕಿ ಹಾಲು ಸೇವಿಸುವಾಗ ಆ ಕರು ಎಂತಹ ಸಂತೃಪ್ತಿಯನ್ನು ಅನುಭವಿಸುತ್ತದೆಯೋ ಅದೇ ರೀತಿ ತಾಯ ಸ್ವರೂಪದ ಲಿಂಗದಿಂದ ಹಸಿದು ಹಂಬಲಿಸಿದ ಕರುವಿನ ಸ್ಥಿತಿಯ ಭಕ್ತನು ಲಿಂಗಾಂಗಯೋಗದಲ್ಲಿ ಅಮೃತಸಮಾನ ಮಹಾಲಿಂಗದ ಚೈತನ್ಯವನ್ನು ಸ್ವೀಕರಿ ಸಂಭ್ರಮಿಸುವನು ಎಂದು ಇಲ್ಲಿ ವರ್ಣಿಸಲಾಗಿದೆ. ಇದುವೇ ಅಂಗ ಲಿಂಗ ಸಂಗಮ ಸುಖ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

ಹಡಪದ ಅಪ್ಪಣ್ಣ ಕಂಚಿನ ಮೂರ್ತಿ ಉದ್ಘಾಟನೆ | ಹಡಪದ ಸಮಾಜದ ಜನಜಾಗೃತಿ ಸಮಾವೇಶ

## ಕಾಯಕತ್ವದಲ್ಲಿ ದೈವತ್ವ ಕಂಡ ಅಪ್ಪಣ್ಣ :ಶಾಸಕ ಯಶವಂತರಾಯಗೌಡ

ಉದಯರಶ್ಮಿ ನ್ಯೂಸ್

ಇಂಡಿ: 12 ನೆಯ ಶತಮಾನದ ಸಾಮಾಜಿಕ ಅಂದೋಲನದ ನಾಯಕನಾಗಿದ್ದ ವಚನಕಾರರಲ್ಲಿ ಪ್ರಭಲರಾಗಿದ್ದ ಅಪ್ಪಣ್ಣರನ್ನು ಅಂ-ದು ಪ್ರಮುಖವಾಗಿ ಕಾಣಿಸಿಕೊಂಡರೆ ಇಂದು ಇಂಡಿಯಲ್ಲಿ ಕಂಚಿನ ಮೂರ್ತಿಯ ಮೂಲಕ ಹಡಪದ ಅಪ್ಪಣ್ಣ ಮರು ಸ್ಥಾಪನೆಗೊಂಡಿದ್ದಾರೆ ಎಂದು ಶಾಸಕ ಯಶವಂತರಾಯಗೌಡ ಪಾಟೀಲ ಬಣ್ಣಿಸಿದರು.

ಪಟ್ಟಣದ ಶ್ರೀ ಹಡಪದ ಅಪ್ಪಣ್ಣ ವೃತ್ತದ ಕಂಚಿನ ಮೂರ್ತಿ ಉದ್ಘಾಟನೆ ಮತ್ತು ಪೋಲಿಸ್ ಮೈದಾನದಲ್ಲಿ ನಡೆದ ಹಡಪದ ಅಪ್ಪಣ್ಣನವರ ಸಮಾಜದ ಜನ ಜಾಗೃತಿ ಸಮಾವೇಶದಲ್ಲಿ ಮಾತನಾಡುತ್ತಿದ್ದರು.

ಹಡಪದ ಅಪ್ಪಣ್ಣನವರು ಸಮಾಜಕ್ಕೆ ಸಂಸ್ಕಾರ ನೀಡಿದ್ದು ಸರ್ವರನ್ನು ಪ್ರೀತಿಸುವ ಸಮಾಜದ




ನಿರ್ಮಾಣದ ಕಲ್ಪನೆ ನೀಡಿದ್ದಾರೆ. ಸಮಾಜ ಬಾಂಧವರು ಶಿಕ್ಷಣ, ಸಂಘಟನೆ ಹೋರಾಟದ ಪರಿಕಲ್ಪನೆಯಲ್ಲಿ ಸಮಾಜವನ್ನು ಮುನ್ನಡೆಸಬೇಕಾಗಿದೆ. ಈಗಾಗಲೇ ಈ ಸಮಾಜ ರಾಜ್ಯದಲ್ಲಿಯೇ ಅತ್ಯುತ್ತಮ ಶಿಕ್ಷಣ ಸಂಸ್ಥೆ ಮತ್ತು ಪ್ರಗತಿಶೀಲ ಬ್ಯಾಂಕು ಹೊಂದಿದೆ. ಅದಲ್ಲದೆ ರಾಜ್ಯದಲ್ಲಿಯೇ ಕಂಚಿನ ಮೂರ್ತಿ ಮೂರ್ತಿ ಸ್ಥಾಪಿಸಿದ್ದು ಇಂಡಿಯಲ್ಲಿ ಮಾತ್ರ ಎಂದರು.

ತಂಗಡಗಿ ಕ್ಷೇತ್ರದ ಶ್ರೀ ಅನ್ನದಾನಿ ಭಾರತಿ ಅಪ್ಪಣ್ಣ ಶ್ರೀಗಳು ಮಾತನಾಡಿ ಹಡಪದ ಅಪ್ಪಣ್ಣನವರ ಚಿಂತನೆಗಳನ್ನು ಸಮಾಜದ ಪ್ರತಿಯೊಬ್ಬರೂ ರೂಢಿಸಿಕೊಂಡು ಅವರ ಸ್ಮರಣೆ ಮಾಡುತ್ತ ಪರಸ್ಪರ ಪ್ರತಿಯಿಂದ ಬಾಳುತ್ತ ಸಮಾಜದ ಸರ್ವತೋಮುಖ ಅಭಿವೃದ್ಧಿಗೆ ಸಹಕರಿಸಬೇಕಾಗಿದೆ ಎಂದರು.

ಗುರುದೇವ ಕಾತ್ರಾಳದ ಅಮೃತಾನಂದ ಶ್ರೀಗಳು ಮಾತನಾಡಿ ಪೂಜೆ ಮಾಡಿದರೂ ಕಾಯಕವೇ, ಸಣ್ಣ ಕೆಲಸ ಮಾಡಿದರೂ ಕಾಯಕವೇ. ಅಪ್ಪಣ್ಣ ಸಮಾಜ ವೃದ್ಧರನ್ನು ಸುಂದರವಾಗಿ ಸೇರಿದಂತೆ ಎಲ್ಲರನ್ನೂ ಸುಂದರವಾಗಿ ಕಾಣಲು ಕ್ಷೌರಿಕ ವೃತ್ತಿ ಮಾಡುತ್ತಿದ್ದು, ಅದು ಸಣ್ಣ ಕೆಲಸವಲ್ಲ, ಅವರು ಕಾಯಕತ್ವದಲ್ಲಿ ದೈವತ್ವ ಕಾಣುವರು. ಅಪ್ಪಣ್ಣ ಸಮಾಜ ಸಶಕ್ತವಾಗಿ ಬೆಳೆಯಬೇಕಾಗಿದೆ, ಸಮಾಜದ ಯುವಕರು ಈ ಕುರಿತು ಚಿಂತನೆ ಮಾಡಬೇಕಾಗಿದೆ ಎಂದರು.

ಅಥರ್ಗಾದ ಈಶಪ್ರಸಾದ ಶ್ರೀಗಳು, ಇಂಡಿಯ ಸ್ವರೂಪಾನಂದ ಶ್ರೀಗಳು, ಉಪನ್ಯಾಸಕ ಸತ್ಯಪ್ಪ ಹಡಪದ, ಕಲಬುರಗಿ ಹಡಪದ ಅಪ್ಪಣ್ಣ ಸಮಾಜದ ಜಿಲ್ಲಾ ಅಧ್ಯಕ್ಷ ಈರಣ್ಣ ಹಡಪದ, ಕಾಸುಗೌಡ ಬಿರಾದಾರ, ಬಸವರಾಜ ಗೊರನಾಳ, ಧರ್ಮರಾಜ ಮುಜಗೊಂಡ ಮಾತನಾಡಿದರು.

ಇದೇ ವೇಳೆ ಸಮಾಜಕ್ಕೆ ಶ್ರಮಿಸಿದ ಬ್ಯಾಂಕಿನ ಮುಖ್ಯ ಕಾರ್ಯನಿರ್ವಾಹಕ ಸಿದ್ದರಾಯ ಅಪ್ತಾಗಿರಿ, ಸಮಾಜದ ಅಧ್ಯಕ್ಷ ಸಿದ್ದು ನಾವಿ, ಶ್ರೀಮತಿ ಶಕುಂತಲಾ ನಾವಿ, ಸಂತೋಷ ಗವಳಿ, ನಟರಾಜ ಗವಳಿ, ಶಿವಾನಂದ ನಾವಿ, ಅಶೋಕ ಹಡಪದ, ಬಸವರಾಜ ನಾವಿ, ಧೂಳಪ್ಪ ನಾವಿ ಮತ್ತು ಪುರಸಭೆಯ ಸದಸ್ಯರನ್ನು ವಿವಿಧ ಸಮಾಜದ ಗಣ್ಯರನ್ನು ಸನ್ಮಾನಿಸಿದರು.

ಸಮಾರಂಭದಲ್ಲಿ ವಿಜಯಪುರದ ಹಡಪದ ಅಪ್ಪಣ್ಣ ಸಮಾಜದ ಜಿಲ್ಲಾಧ್ಯಕ್ಷ ಬಸವರಾಜ ಶಿವಶರಣ, ಸಿಂದಗಿಯ ಶಿವಾನಂದ ಹಡಪದ, ನಿಂಗಪ್ಪ ನಾವಿ, ಸೋಲಾಪುರದ ಪಂಡಿತ ಏಳಗಿ, ಭಾರತಿ ನಾವಿ, ಸುನೀಲ ಉಕನಾಳ ಮತ್ತಿತರಿದ್ದರು.

ಆರ್ಗಾನೋ ಪಾಸ್ಪರಸ್ ಕಂಪೌಂಡ್‌ನಿಂದ ಪ್ರಜ್ಞಾಹೀನ ಸ್ಥಿತಿಯಲ್ಲಿದ್ದ ವ್ಯಕ್ತಿಗೆ ಯಶಸ್ವಿ ಚಿಕಿತ್ಸೆ ನೀಡಿದ ವೈದ್ಯರು

# ಸಾವಿನಂಚಿನಲ್ಲಿದ್ದ ಜೀವಕ್ಕೆ ಮರುಜೀವ ನೀಡಿದ ಜೆಎಸ್‌ಎಸ್ ಆಸ್ಪತ್ರೆ

**ಉದಯರಶ್ಮಿ ನ್ಯೂಸ್**

ವಿಜಯಪುರ: "ಇನ್ನೇನು ನನ್ನ ಮಗನ ಬದುಕು ಇಲ್ಲಿಗೆ ಮುಗಿಯಿತು ಎಂದುಕೊಂಡು ಕಣ್ಣೀರು ಹಾಕುತ್ತ ಈ ಆಸ್ಪತ್ರೆಗೆ ಬಂದಾಗ "ಕಾಯುವುದು ಕೊಲ್ಲುವುದು ಅದು ಮೇಲಿನವನ ಕೈಯಲ್ಲಿದೆ. ಬದುಕುತ್ತಾನೆ ಎನ್ನುವ ಭರವಸೆಯಿಂದ ನಮ್ಮ ಪ್ರಯತ್ನ ನಾವು ಮಾಡುತ್ತೇವೆ ಮುಂದಿನ ಭಗವಂತನ ಮೇಲೆ ಬಿಡೋಣ" ಎಂದು ಹೇಳಿದಾಗ ನನ್ನ ಮಗ ಉಳಿಯಬಹುದು ಎನ್ನುವ ಒಂದು ಸಣ್ಣ ಭರವಸೆಯಲ್ಲಿ ಈ ದಾಖಲು ಮಾಡಿದೆ. ನಡೆದಾಡುವ ದೇವರ ಹೆಸರಲ್ಲಿ ನಿರ್ವಾಣ ಮಾಡಿದ ಈ ಆಸ್ಪತ್ರೆಯು ನನ್ನ ಮಗನಿಗೆ ಪುನರ್ಜನ್ಮ ನೀಡಿದೆ. ಸಾವಿನ ಮನೆಯ ಬಾಗಿಲಿನ ಮುಂದೆ ನಿಂತು ಕದ ತಟ್ಟುತ್ತಲಿದ್ದವನನ್ನು ಬದುಕಿನ ಅಂಗಳಕ್ಕೆ ತಂದು ಬಿಟ್ಟ ಆಸ್ಪತ್ರೆಯ ವೈದ್ಯರಿಗೆ ಹಾಗೂ ಇಲ್ಲಿನ ಸಿಬ್ಬಂಧಿಗಳಿಗೆ ನಾನು ಚಿರಋಣಿಯಾಗಿರುತ್ತೇನೆ. ಬಹುತೇಕ ಸತ್ತೇ ಹೋದವನನ್ನು ಬದುಕಿಸುವ ಶಕ್ತಿ ಈ ಆಸ್ಪತ್ರೆಗಿದೆ. ಪೂಜ್ಯರ ಆಶೀರ್ವಾದಕ್ಕಿದೆ" ಎಂದು ಕಣ್ಣಂಚಿಂದ ಜಿನುಗುತ್ತಲಿದ್ದ ಹನಿಯನ್ನು ಒರೆಸಿಕೊಳ್ಳುತ್ತ ಆಸ್ಪತ್ರೆಯಲ್ಲಿ ದೊರೆತ ಚಿಕಿತ್ಸೆಯ ಕುರಿತು ರೋಗಿಯ ತಂದೆ ಮಾಹಿತಿ ನೀಡುವಾಗ ಸುತ್ತಲಿದ್ದವರು ಸಹ ಕಣ್ಣೀರಾದ ಘಟನೆ ನಡೆದಿದ್ದು ನಗರದ ಜೆಎಸ್‌ಎಸ್ ಆಸ್ಪತ್ರೆಯಲ್ಲಿ.

ವೈಯಕ್ತಿಕ ಕಾರಣಗಳಿಂದ ವಿಷ ಸೇವನೆ ಮಾಡಿ ಆಸ್ಪತ್ರೆಗೆ ಜ್ಞಾನಯೋಗಿ ಶ್ರೀ ಸಿದ್ಧೇಶ್ವರ ಸ್ವಾಮೀಜಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ದಾಖಲಾಗಿದ್ದ ಕಲ್ಲಪ (ಹೆಸರು ಬದಲಿಸಲಾಗಿದೆ) ಎನ್ನುವ ವ್ಯಕ್ತಿಯು ಅದಗಲೇ ಸಾವಿನ ಅಂಚಿನಲ್ಲಿದ್ದ. ವಿಷ ಸೇವಿಸಿದ್ದನ್ನು ಗಮನಿಸಿ ನಗರದ ವಿವಿಧ ಆಸ್ಪತ್ರೆಗಳಿಗೆ ತೆಗೆದುಕೊಂಡು ಹೋಗಿ ಚಿಕಿತ್ಸೆ ಕೊಡಿಸಿದ ಮನೆಯವರಿಗೆ ಇವರ ಬದುಕಿನ ಕುರಿತು ಯಾವುದೇ ಭರವಸೆ ದೊರೆಯಲಿಲ್ಲ. ವಿಷದ ಪರಿಣಾಮ ಮೆದುಳಿನ ಮೇಲೆ ಆಗಿದ್ದರಿಂದ ಈ ವ್ಯಕ್ತಿ ಬದುಕುಳಿಯುವುದು ಬಹುತೇಕ ಅಸಾಧ್ಯ. ಒಂದು ವೇಳೆ ಬದುಕುಳಿದರು ಬಹು ಅಂಗಾಗ ವೈಫಲ್ಯಕ್ಕೆ ತುತ್ತಾಗಬಹುದು. ಹೀಗಿದ್ದರೂ ಸುಮ್ಮನೆ ಹಣವನ್ನು ಖರ್ಚು ಮಾಡುತ್ತಿರುವಿರಿ ಸುಮ್ಮನೆ ಮನೆಗೆ ಕರೆದುಕೊಂಡು ಹೋಗಿ ಎಂದು ಸಲಹೆ ನೀಡಿದಾಗ ದಾರಿ ಕಾಣದೇ ಆ ವ್ಯಕ್ತಿಯ ತಂದೆ ಜೆ-ಎಸ್‌ಎಸ್ ಆಸ್ಪತ್ರೆಗೆ ರೋಗಿಯನ್ನು ಕರೆದುಕೊಂಡು ಬಂದಿದ್ದಾರೆ. ಪರೀಕ್ಷೆ ಮಾಡಿದ ವೈದ್ಯರು ನಮ್ಮ ಕೈಲಾದ ಪ್ರಯತ್ನವನ್ನು ಮಾಡೋಣ ಎಂದು ಹೇಳಿ ಐಸಿಯುಗೆ ದಾಖಲಿಸಿದ ನಂತರದಲ್ಲಿ ಸರಿ ಸುಮಾರು ಎರಡು ತಿಂಗಳ ಕಾಲ ನಿರಂತರ ಚಿಕಿತ್ಸೆಯನ್ನು ನೀಡಿ ಬದುಕುವುದು ಬಹುತೇಕ ವಿರಳ ಎನ್ನುವ ಪ್ರಕರಣವನ್ನು ಯಶಸ್ವಿ ಚಿಕಿತ್ಸೆ ಮೂಲಕ ರೋಗಿಯನ್ನು ಬದುಕಿಸಿದ್ದಾರೆ.

ಈ ಪ್ರಕರಣವನ್ನು ಯಶಸ್ವಿಯಾಗಿ ನಿಭಾಯಿಸಿ ಸಾವಿನಂಚಿನಲ್ಲಿರುವ ವ್ಯಕ್ತಿಗೆ ಜೀವದಾನ ಮಾಡಿದ್ದಕ್ಕಾಗಿ ವೈದ್ಯರು ಹಾಗೂ ಸಿಬ್ಬಂಧಿ ವರ್ಗದವರನ್ನು ನಗರ ಶಾಸಕರು ಹಾಗೂ ಶ್ರೀ ಸಿದ್ಧೇಶ್ವರ ಲೋಕ ಕಲ್ಯಾಣ ಚಾರಿಟೆಬಲ್ ಟ್ರಸ್ಟ್ ಅಧ್ಯಕ್ಷರಾದ ಬಸನಗೌಡ ರಾ ಪಾಟೀಲ ಯತ್ನಾಳ ಹಾಗೂ ಆಸ್ಪತ್ರೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಶರಣ ಮಳಖೇಡ್ಕರ ಅಭಿನಂದಿಸಿದ್ದಾರೆ.

"ರೋಗಿಯು ನಮ್ಮ ಆಸ್ಪತ್ರೆಗೆ ದಾಖಲಾಗುವ ಸಂದರ್ಭದಲ್ಲಿ ಅದಾಗಲೇ ನಾಲ್ಕಾರು ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದುಕೊಂಡು ಬಂದಿದದ್ದರು. ನಾವು ಪರೀಕ್ಷೆ ಮಾಡಿ ನೋಡಿದಾಗ ವಿಷ ಸೇವನೆಯ ಪರಿಣಾಮವಾಗಿ ಆರ್ಗಾನೋ ಪಾಸ್ಪರಸ್ ಕಾಂಪೌಂಡ್ ಪರಿಣಾಮದಿಂದಾಗಿ ಉಸಿರಾಟದ ತೊಂದರೆಗೊಳಗಾಗಿದ್ದರು. ಮತ್ತು ಬಹು ಅಂಗಗಳು ಕಾರ್ಯ ಸ್ಥಗಿ-ತಗೊಳಿಸಿದ್ದವು. ಸಂಪೂರ್ಣವಾಗಿ ಪ್ರಜ್ಞಾಹೀನ ಸ್ಥಿತಿಯಲ್ಲಿದ್ದರು. ಒಂದು ಹಂತದಲ್ಲಿ ನಾವು ಸಹ ಇವರ ಬದುಕಿನ ಬಗ್ಗೆ ಅನುಮಾನ ಪಟ್ಟಿದ್ದೆವು. ಆದರೆ ವೈದ್ಯರಾದವರು ಯಾವತ್ತೂ ಭರವಸೆ ಕಳೆದುಕೊಳ್ಳಬಾರದು ಎನ್ನುವ ನಂಬಿಕೆಯಿಂದ ಟ್ರಾಕೆಸ್ಟಮಿ ಟ್ಯೂಬ್ ಅಳವಡಿಸಿ ವೆಂಟಿಲಿಟರ್ ಸಹಾಯ ಮೂಲಕ ಚಿಕಿತ್ಸೆ ನೀಡುತ್ತ ಬಂದ ಪರಿಣಾಮವಾಗಿ ಆ ವ್ಯಕ್ತಿಯು ಇಂದು ಬದುಕುಳಿದ್ದಾನೆ. ಸ್ವಾಧೀನ ಕಳೆದುಕೊಂಡಿದ್ದ ಕೈಕಾಲುಗಳು ಸಹ ಮರಳಿದ್ದು ತನ್ನಷ್ಟಕ್ಕೆ ತಾನೆ ನಡೆದುಕೊಂಡು ಸಾಗುತ್ತಿದ್ದಾನೆ. ವೈದ್ಯರಾಗಿ ನಾವು ಮಾಡಿದ ಚಿಕಿತ್ಸೆ ಒಂದೆಡೆ ಫಲಕೊಟ್ಟರೆ ಮತ್ತೊಂದೆಡೆ ಪೂಜ್ಯ ಸಿದ್ಧೇಶ್ವರ ಅಪ್ಪಾಜಿ ಅವರ ಕೃಪಾಶಿರ್ವಾದ ಸಹ ಅವರನ್ನು ಬದುಕಿಸಿದೆ"

– ಡಾ.ಶಿವಕುಮಾರ ಕತ್ತಿ, ಚಿಕಿತ್ಸೆ ನೀಡಿದ ತಜ್ಞ ವೈದ್ಯರು

# ಜಿಲ್ಲಾ ಸೈನಿಕ ಮಂಡಳಿ ಪುನರಚನೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ವಿಜಯಪುರ ಜಿಲ್ಲೆಯ ಸೈನಿಕ್ ಮಂಡಳಿಯನ್ನು ಪುನರ್ ರಚಿಸಲಾಗುತ್ತಿದ್ದು, ಮಂಡಳಿಗೆ ನೇಮಕಾತಿ ಬಯಸುವ ಮಾಜಿ ಸೈನಿಕರು ಹಾಗೂ ಸೇನೆ ನಿವೃತ್ತ ಅಧಿಕಾರಿಗಳು ತಮ್ಮ ಸೇವೆಯ ಸಂಕ್ಷಿಪ್ತ ಹಿನ್ನಲೆ ಮತ್ತು ಪೂರ್ವ ಚರಿತ್ರೆಯನ್ನು ನವೆಂಬರ್ 17 ರೊಳಗೆ ಸೈನಿಕ್ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ವಿಜಯಪುರ ಕಚೇರಿಗೆ ಸಲ್ಲಿಸುವಂತೆ ಕೋರಲಾಗಿದೆ. ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ದೂ: 08352-250913 ಸಂಖ್ಯೆಗೆ ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

# ನ.10ರಂದು ಮುಸ್ಲಿಂ ಸಮಾಜದ ಸಭೆ

**ಉದಯರಶ್ಮಿ ನ್ಯೂಸ್**

ಹೂವಿನಹಿಪ್ಪರಗಿ: ಸಮೀಪದ ಗೂಗಿ ಅಗಸಬಾಳ ಗ್ರಾಮದ ಅಂಜುಮನ್ ಇಸ್ಲಾಂ ಕಮೀಟಿ ರಚನೆ ಮಾಡುವ ಸಲುವಾಗಿ ನ.10 ಶುಕ್ರವಾರ ಸಾಯಂಕಾಲ 6 ಘಂಟೆಗೆ ಗ್ರಾಮದ ಅಂಜುಮನ್ ಮಜಿದ್ ನಲ್ಲಿ ಮುಸ್ಲಿಂ ಸಮಾಜದ ಸಭೆ ಕರೆಯಲಾಗಿದ್ದು ಗ್ರಾಮದ ಎಲ್ಲಾ ಮುಸ್ಲಿಂ ಭಾಂದವರು ಸಭೆಗೆ ಹಾಜರಾಗಬೇಕೆಂದು ಸಮಾಜದ ಮುಖಂಡ ನಯುಮ ಹಳಕೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನ.10ರಂದು ಮೀನುಮರಿಗಳ ವಿತರಣೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ಭೂತನಾಳ ಮೀನುಗಾರಿಕೆ ಸಂಶೋಧನೆ ಮತ್ತು ಮಾಹಿತಿ ಕೇಂದ್ರದ ವತಿಯಿಂದ ನವೆಂಬರ್ 10ರಂದು ಬೆಳಿಗ್ಗೆ 10 ಗಂಟೆಗೆ ಮೀನುಮರಿಗಳ ವಿತರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ತಲಾ ಒಂದು ರೂಪಾಯಿಗೆ ಒಂದರಂತೆ ಸಾಮಾನ್ಯ ಗೆಂಡೆ (ಗೌರಿ) ಮೀನು ಮರಿಗಳನ್ನು ಮಾರಾಟ ಮಾಡಲಾಗುವುದು. ರೈತರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಕೇಂದ್ರದ ಸಹ ಪ್ರಾಧ್ಯಾಪಕ ಮತ್ತು ಮುಖ್ಯಸ್ಥರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನ.11 ರಿಂದ ಭೀರದೇವರ & ಪರಮಾನಂದ ದೇವರ ಜಾತ್ರೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ದೀಪಾವಳಿ ಹಬ್ಬದ ನಿಮಿತ್ತ ಪ್ರತಿವರ್ಷದಂತೆ ಈ ವರ್ಷವೂ ಶ್ರೀ ಭೀರದೇವರ ಹಾಗೂ ಪರಮಾನಂದ ದೇವರ ಜಾತ್ರಾ ಮಹೋತ್ಸವ ಜರುಗಲಿದೆ.

ಶನಿವಾರ ದಿ:11 ರಂದು ನೀರು ತುಂಬುವ ಹಬ್ಬ,ಸಂಜೆ ಹೂವಿನ ಹಚ್ಚಡ, ದೀವಟಿಗೆ ಆರತಿ ಕಾರ್ಯಕ್ರಮ ಇರುವದು. ದಿ:10 -11 ರಂದು ಲೋಡೋ ಆಟ, ಟ್ರ್ಯಾಕ್ಟರ್ ರೇಸ್ ನಡೆಯಲಿದೆ.

ರವಿವಾರ ದಿ:12ರಂದು ಬೆಳಿಗ್ಗೆ ಗ್ರಾಮದ ಅಕ್ಕಮಹಾದೇವಿ ಗುಡಿಯಿಂದ 8 ಕಿ ಮೀ ಗುಡ್ಡಗಾಡು ಓಟದ ಸ್ಪರ್ಧೆ(ಮಿನಿ ಮ್ಯಾರಥಾನ್) ಇದೆ. ಈ ಓಟದ ಸ್ಪರ್ಧೆಯ ವಿಜೇತರಿಗೆ ನಗದು ಬಹುಮಾನ ಇದೆ. ಅದೇ ದಿನ ಬೆಳಿಗ್ಗೆ 9 ಗಂಟೆಗೆ ಭೀರದೇವರ ದೇವಸ್ಥಾನದಲ್ಲಿ ಕರಜ-ಗಿಯ ಬರಮದೇವರ ಹಾಗೂ ಬಾಬಾನಗರದ ಸಿದ್ದೇಶ್ವರ ಡೊಳ್ಳಿನ ಸಂಘಗಳಿಂದ ಡೊಳ್ಳಿನ ಪದಗಳು ಇವೆ. ಸಂಜೆ ಕಗ್ಗೋಡ ಹಾಗೂ ಗೂಳಪ್ಪ ದೇವರ ಪಲ್ಲಕ್ಕಿ ಆಗಮನವಾಗುವುದು.



ಸೋಮವಾರ ದಿ:13 ರಂದು ನಸುಕಿನ 3 ಗಂಟೆಗೆ ಗೂಗದಡ್ಡಿಯಿಂದ ಶ್ರೀ ಮಹಾಲಕ್ಷ್ಮೀ ಪಲ್ಲಕ್ಕಿ ಆಗಮನ, ಬೆಳಿಗ್ಗೆ 4 ಗಂಟೆಗೆ ಶ್ರೀ ಭೀರದೇವರ ಶೃಂಗಾರ ಚೌಕಿಂ-ರೊಂದಿಗೆ ಭಕ್ತರ ಮನೆ ಮನೆಗೆ ದರ್ಶನ ಕೊಡುತ್ತಾ ಗಂಗೆ ಸೀತಾಳಕ್ಕೆ ಹೋಗಿ, ಅಲ್ಲಿ ಪೂಜಾ ಮುಗಿಸಿಕೊಂಡು ಬಜಾರಕ್ಕೆ ಆಗಮನವಾಗಿ ಭಕ್ತರಿಗೆ ದರ್ಶನ ಕೊಡುವದು.ನಂತರ ಸಕಲ ವಾದ್ಯ ಮೇಳದೊಂದಿಗೆ ಗುಡಿಗೆ ಬರುವುದು. ಮಧ್ಯಾನ್ಹ 3 ಗಂಟೆಗೆ ಶಾಲಾ ಆವರಣದಲ್ಲಿ ಭಾರ ಎತ್ತುವ ಸ್ಪರ್ಧೆ ಜರುಗಲಿದೆ. ಅದೇ ದಿನ ಸಂಜೆ 7ಕ್ಕೆ ಪರಮಾನಂದ ಗುಡಿಯಲ್ಲಿ ಗೂಗದಡ್ಡಿಯ ಲಾಯಮ್ಮದೇವಿ ಹಾಗೂ ಹರನಾಳದ ಅಮೋಘಸಿದ್ದೇಶ್ವರ ಸಂಘದಿಂದ ಡೊಳ್ಳಿನ ಪದಗಳು ನಡೆಯುವದು.

ಮಂಗಳವಾರ ದಿ:14 ರಂದು ಬೆಳಿಗ್ಗೆ 4 ಗಂಟೆಗೆ ಶ್ರೀ ಪರಮಾನಂದ ದೇವರ ಶೃಂಗಾರ ಚೌಕಿಯೊಂದಿಗೆ ಸಾರವಾಡ ಗೊಂಬೆ ಕುಣಿತ, ಗೂಗದಡ್ಡಿಯ ಲಾಯಮ್ಮದೇವಿ ಡೊಳ್ಳಿನ ಸಂಘದಿಂದ ವಿಶೇಷ ಡೊಳ್ಳಿನ ವಾಲಗದೊಂದಿಗೆ ಭಕ್ತರ ಮನೆಗೆ ಭೇಟಿ ಕೊಡುತ್ತ ಗಂಗೆ ಸೀತಾಳಕ್ಕೆ ಹೋಗುವುದು. ಅಲ್ಲಿ ಪೂಜಾ ವಿಧಿವಿಧಾನ ಮುಗಿಸಿಕೊಂಡು ಮುತ್ತಪ್ಪದೇವರ ಗುಡಿ ಮುಂದೆ ಹೇಳಿಕೆ ನುಡಿದು, ಬಜಾರಕ್ಕೆ ಆಗಮನವಾಗಿ ಭಕ್ತರಿಗೆ ದರ್ಶನ ಕೊಟ್ಟು, ದೇವಸ್ಥಾನಕ್ಕೆ ಬರುವುದು. ಸಂಜೆ 4 ಗಂಟೆಗೆ 18 ರಿಂದ

# ಆರೋಗ್ಯ ತಪಾಸಣೆ ಉಚಿತ ಶಿಬಿರ



**ಉದಯರಶ್ಮಿ ನ್ಯೂಸ್**

ವಿಜಯಪುರ: ಬಿ.ಎಲ್.ಡಿ.ಈ ಸಂಸ್ಥೆಯ ಎ.ವಿ.ಎಸ್ ಆಯುರ್ವೇದ ಮಹಾವಿದ್ಯಾಲಯ ವತಿಯಿಂದ ವಿಶ್ವ ಆಹಾರ ದಿನಾಚರಣೆಯ ಅಂಗವಾಗಿ ನಗರದ ಸರಕಾರಿ ಮರಾಠಿ ಗಂಡು ಮಕ್ಕಳ ಶಾಲೆ ಸಂಖ್ಯೆ 1 ಮತ್ತು ಸರಕಾರಿ ಹೆಣ್ಣು ಮಕ್ಕಳ ಹಿರಿಯ ಪ್ರಾಥಮಿಕ ಶಾಲೆ ಸಂಖ್ಯೆ 11 ರಂದು ಬುಧವಾರ ಉಚಿತ ಆರೋಗ್ಯ ತಪಾಸಣೆ ಶಿಬಿರ ನಡೆಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಕಾಲೇಜಿನ ಸಂಹಿತಾ ಸಿದ್ಧಾಂತ ವಿಭಾಗದ ಮುಖ್ಯಸ್ಥೆ ಪ್ರೊ. ರೇಣುಕಾ ತೆನಹಳ್ಳಿ, ಪ್ರತಿನಿತ್ಯ ಪೌಷ್ಠಿಕ ಆಹಾರ ಸೇವನೆ ವಿಧಾನ ಮತ್ತು ಮಹತ್ವದ ಕುರಿತು ಮಾಹಿತಿ ನೀಡಿದರು.

ಕೌಮಾರಭೃತ್ಯ ವಿಭಾಗದ ಮುಖ್ಯಸ್ಥೆ ಡಾ. ವಿಜಯಲಕ್ಷ್ಮಿ ಬೆನಕಟ್ಟಿ ಅವರು ಮಕ್ಕಳ ಬೆಳವಣಿಗೆ ಬಗ್ಗೆ ಪೂರಕವಾದ ಪೌಷ್ಠಿಕಾಂಶಯುಕ್ತ ಆಹಾರ ಮಹತ್ವದ ಕುರಿತು ಮಾತನಾಡಿದರು.

ಸಂಹಿತಾ ಸಿದ್ಧಾಂತ ವಿಭಾಗದ ಸಹ ಪ್ರಾಧ್ಯಾಪಕ ಮತ್ತು ರಾಷ್ಟ್ರೀಯ ಸ್ವಯಂ ಸೇವಾ ಸಂಘದ ಯೋಜನಾಧಿಕಾರಿ ಡಾ. ರಾವಸಾಹೇಬ ದೇಶಮುಖ ಅವರು ವಿಶ್ವ ಆಹಾರ ದಿನದ ಅಂಗವಾಗಿ ಪೌಷ್ಠಿಕ ಆಹಾರ ಮತ್ತು ಸ್ವಚ್ಚ ಪರಿಸರ ಹಾಗೂ ಮಕ್ಕಳ ಬೆಳವಣಿಗೆಯ ವಿಷಯದ ಕುರಿತು ನೀರೇ ಜೀವನ ನೀರೇ ಆಹಾರ ಯಾವುದನ್ನು ಬಿಡಬೇಡಿ ಎಂಬ ಧೇಯವಾಕ್ಯದೊಂದಿಗೆ ಶಾಲಾ ಮಕ್ಕಳಿಗೆ ಪ್ರತಿಜ್ಞಾ ವಿಧಿ ಭೋದಿಸಿದರು.

ಈ ಸಂದರ್ಭದಲ್ಲಿ ಪ್ರಾಚಾರ್ಯರಾದ ಶೇರಖಾನೆ, ರಜಪೂತ, ಶಿಕ್ಷಕರಾದ ಸತೀಶ ಚವ್ಹಾಣ ಮುಂತಾದವರು ಉಪಸ್ಥಿತರಿದ್ದರು.

ಈ ಶಿಬಿರದಲ್ಲಿ ಡಾ. ಮಂಜುಳಾ, ಡಾ. ದೌಲಬಿ ಹಾಗೂ ವೈದ್ಯ ವಿದ್ಯಾರ್ಥಿನಿಯರಾದ ಶ್ರೇಯಾ, ರೀನಾ ಉಪಸ್ಥಿತರಿದ್ದರು. 200ಕ್ಕೂ ಹೆಚ್ಚು ಶಾಲಾ ಮಕ್ಕಳ ಆರೋಗ್ಯ ತಪಾಸಣೆ ನಡೆಸಲಾಯಿತು.

ಲೋಕಾಯುಕ್ತ ವಿಜಯಪುರ ಇವರ ಸಾರ್ವಜನಿಕರಿಂದ ಅಹವಾಲು ಸ್ವೀಕಾರ

# ನಾವು ಭ್ರಷ್ಟಾಚಾರದ ಭಾಗವಾಗಬಾರದು :ಡಿವೈಎಸ್ಪಿ ಸುರೇಶ ರೆಡ್ಡಿ

**ಉದಯರಶ್ಮಿ ನ್ಯೂಸ್**



ದೇವರಹಿಪ್ಪರಗಿ: ಭ್ರಷ್ಟಾಚಾರರಹಿತ ಆಡಳಿತದ ಅಗತ್ಯತೆ ಇಂದು ಹೆಚ್ಚಾಗಿದೆ. ಆದ್ದರಿಂದ ನಾವು ಯಾವುದೇ ಕಾರಣ ಭ್ರಷ್ಟಾಚಾರದ ಭಾಗವಾಗಬಾರದು ಎಂದು ವಿಜಯಪುರ ಲೋಕಾಯುಕ್ತ ಡಿವೈಎಸ್ಪಿ ಸುರೇಶ ರೆಡ್ಡಿ ಹೇಳಿದರು.

ಪಟ್ಟಣದ ಪಂಚಾಚಾರ್ಯ ಕಲ್ಯಾಣ ಮಂಟಪದಲ್ಲಿ ಗುರುವಾರ ಜರುಗಿದ ಕರ್ನಾಟಕ ಲೋಕಾಯುಕ್ತ ವಿಜಯಪುರ ಇವರ ಸಾರ್ವಜನಿಕ-ರಿಂದ ಅಹವಾಲು ಸ್ವೀಕಾರ ಹಾಗೂ ಅಧಿಕಾರಿಗಳ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಸರ್ಕಾರದ ಎಲ್ಲ ಇಲಾಖೆಗಳಲ್ಲಿ ಒಳ್ಳೆಯವರು ಇದ್ದಾರೆ. ಹಾಗೂ ಕೆಟ್ಟವರು ಇದ್ದಾರೆ. ಆದರೆ ಸರ್ಕಾರದ ಕೆಲಸ ದೇವರ ಕೆಲಸ ಎಂದು ತಿಳಿದು ಒಳ್ಳೆಯವರು ಯಾವುದೇ ಆಮಿಷಗಳಿಗೆ ಒಳಗಾಗದೇ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ ಎಂದರು.

ಲೋಕಾಯುಕ್ತ ಉಪಅಧೀಕ್ಷಕ ಆನಂದ ಟಕ್ಕಣ್ಣವರ ಮಾತನಾಡಿ, ಲೋಕಾಯುಕ್ತದ ವ್ಯಾಪ್ತಿ, ಅದರ ಮಹತ್ವ, ಕಾರ್ಯಗಳು, ಉದ್ದೇಶಗಳ ಕುರಿತು ಸಮಗ್ರವಾಗಿ ಮಾಹಿತಿ ಮಾತನಾಡಿದರು.

ಸಭೆಯಲ್ಲಿ ಕೃಷಿ ಇಲಾಖೆಯ ಎಚ್.ವೈ. ಸಿಂಗೇಗೋಳ, ಅಬಕಾರಿ ಇಲಾಖೆಯ ಆರತಿ ಖೈನೂರ, ಶಿಕ್ಷಣ ಇಲಾಖೆಯ ಆರೀಫ್ ಬಿರಾದಾರ, ತೋಟಗಾರಿಕೆ ಇಲಾಖೆಯ ರಾಘವೇಂದ್ರ ಬಗಲಿ, ಆರೋಗ್ಯ ಇಲಾಖೆಯ ಸಂತೋಷ ಯಡಹಳ್ಳಿ, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಎಲ್.ಡಿ. ಮುಲ್ಲಾ ಮಾತನಾಡಿ ತಮ್ಮ ವ್ಯಾಪ್ತಿಯ ಇಲಾಖೆಗಳಲ್ಲಿ ಯೋಜನೆಗಳು, ಕೈಗೊಂಡ ಕಾರ್ಯಕ್ರಮಗಳ ಕುರಿತು ವಿವ-ರಿಸಿದರು.

ಸಭೆಯಲ್ಲಿ ಮುಂಗಾರು ಹಂಗಾಮಿನಲ್ಲಿ ಮಳೆ ಕೊರತೆ, ಬೆಳೆಗಳ ಕುಂಠಿತ, ಗ್ರಾಮಗಳಲ್ಲಿ ಮುಕ್ತ ಮದ್ಯ ಮಾರಾಟ, ಶಾಲೆಗಳಲ್ಲಿ ಶೌಚಾಲಯಗಳ ನಿರ್ಮಾಣ ಹಾಗೂ ಶಾಲೆಗಳ ಮೇಲಿನ ವಿದ್ಯುತ್ ತಂತಿಗಳ ಕುರಿತು ನಿಗಾ ವಹಿಸುವುದು, ಸ್ವಾವಲಂಬಿ ಯೋಜನೆಗಳ ಕುರಿತು ಮಾಹಿತಿ ನೀಡುವುದು. ದಾಳಿಂಬೆ ಹಾಗೂ ದ್ರಾಕ್ಷಿ ಬೆಳೆಗಳ ವಿಮೆಹಣ ಬಿಡುಗಡೆ, ಕೃಷಿ ಸಂಚಯನಿ ಯೋಜನೆಯ ಹನಿ ನೀರಾವರಿ, ನರೇಗಾ ಯೋಜನೆಯಡಿಯ ಕೃಷಿ ಹೊಂಡ ನಿರ್ಮಾಣ, ಸಾಮಾಜಿಕ ಅರಣ್ಯಕರಣ, ಶಾಲಾ ಆವರಣದಲ್ಲಿ ಸಸಿ ನೆಡುವುದು, ಆಸ್ಪತ್ರೆಯಲ್ಲಿ ಶುಚಿತ್ವ ಕಾಪಾಡುವ ವಿಷಯಗಳ ಕುರಿತು ಚರ್ಚೆಗಳು ಕಂಡು ಬಂದವು.

ಸಾರ್ವಜನಿಕರ ಪರವಾಗಿ ಪ್ರಭುಗೌಡ ಪಾಟೀಲ (ಹರನಾಳ), ಪಟ್ಟಣ ಪಂಚಾಯಿತಿ ಸದಸ್ಯ ರಮೇಶ ಮಸಬಿನಾಳ, ರೈತ ಸಂಘದ ತಾಲ್ಲೂಕು ಅಧ್ಯಕ್ಷ ಅಜೀಜ್ ಯಲಗಾರ, ನಾಗಯ್ಯ ಪಂಚಾಳಮಠ ಸೇರಿದಂತೆ ಹಲವರು ಮಾತನಾಡಿದರು. ಇದೇ ಸಂದರ್ಭದಲ್ಲಿ ಪಟ್ಟಣದ ಹಳೇಶಾಲೆಯ ಪುನಶ್ಚೇತನ ಕುರಿತು ಸಾರ್ವಜನಿಕರು ಮನವಿ ಸಲ್ಲಿಸಿದರು.

ಸಾರ್ವಜನಿಕರ ಅಹವಾಲು ಸ್ವೀಕರಿಸಿದ ಲೋಕಾಯುಕ್ತ ಅಧಿಕಾ-ರಿಗಳು ಬರುವ ಒಂದು ತಿಂಗಳಲ್ಲಿ ಸಾರ್ವಜನಿಕರ ಸಮಸ್ಯೆಗಳಿಗೆ ಸೂಕ್ತ ಪರಿಹಾರ, ವ್ಯವಸ್ಥೆ ಮಾಡುವಂತೆ ಸಂಬಂಧಿತ ಅಧಿಕಾರಿಗಳಿಗೆ ಸೂಚಿಸಿದರು.

ಲೋಕಾಯುಕ್ತ ಸಿಪಿಐಯ್ ಆನಂದ ಡೋಣಿ, ತಹಶೀಲ್ದಾರ ಪ್ರಕಾಶ ಸಿಂದಗಿ, ತಾಲ್ಲೂಕು ಪಂಚಾಯಿತಿ ಇಓ ಭಾರತಿ ಚಲುವಯ್ಯ ಸೇರಿದಂತೆ ದೇವರಹಿಪ್ಪರಗಿ, ಸಿಂದಗಿ ತಾಲ್ಲೂಕಿನ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ, ಸಾರ್ವಜನಿಕರು ಇದ್ದರು.

ಭಾರೀ ಮತ್ತು ಮಧ್ಯಮ ಕೈಗಾರಿಕಾ ಸಚಿವರಿಗೆ ಪ್ರಾಥಮಿಕ ವರದಿ ಸಲ್ಲಿಸಿದ ಉನ್ನತ ಸಮಿತಿ

# 6 ಕೈಗಾರಿಕಾ ವಲಯಗಳ ಅಭಿವೃದ್ಧಿಗೆ ವಿಜಯಪುರ ಸೂಕ್ತ

**ಉದಯರಶ್ಮಿ ನ್ಯೂಸ್**

ಬೆಂಗಳೂರು: ವಿಜಯಪುರ ಜಿಲ್ಲೆಯನ್ನು ಇಂಧನ ಕ್ಷೇತ್ರದ ಸಾಧನಗಳು, ಮಶಿನರಿ ಮತ್ತು ಎಕ್ವಿಪ್ಮೆಂಟ್, ನಾನ್-ಮೆಟಲಿಕ್ ಖನಿಜೋತ್ಪನ್ನಗಳು, ಕೃಷಿ ಮತ್ತು ಕೃಷಿ ಆಧಾರಿತ ಉತ್ಪನ್ನಗಳು, ನ್ಯೂಟ್ರಾಸ್ಯುಟಿಕಲ್ಸ್, ಮೆಡಿಸಿನಲ್ ಮತ್ತು ಬೊಟಾನಿಕಲ್ ಉತ್ಪನ್ನಗಳು ಮತ್ತು ವಿಶೇಷ ಅಲಾಯ್ ಹಾಗೂ ಲೋಹೋತ್ಪನ್ನಗಳ ತಯಾರಿಕೆ ಹೀಗೆ ಒಟ್ಟು ಆರು ಕೈಗಾರಿಕಾ ವಲಯಗಳಲ್ಲಿ ಸಮಗ್ರವಾಗಿ ಅಭಿವೃದ್ಧಿಪಡಿಸಲು ಅತ್ಯುತ್ತಮ ಅವಕಾಶಗಳಿವೆ ಎಂದು ಉನ್ನತ ಮಟ್ಟದ ಸಮಿತಿಯೊಂದು ಹೇಳಿದೆ.

ಈ ಸಂಬಂಧದ ಪ್ರಾಥಮಿಕ ವರದಿಯನ್ನು ಅದು ಗುರುವಾರ ಭಾರೀ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಅವರಿಗೆ ಸಲ್ಲಿಸಿದೆ. ಏಕಸ್ ಎಸ್‌ಇಜೆಡ್ ಮತ್ತು ದೆಹಲಿಯ ಸಿಬಿಆರ್ ಇ ಸಂಸ್ಥೆಯ ಪ್ರತಿನಿಧಿಗಳು ಈ ವರದಿಯನ್ನು ಸಿದ್ಧಪಡಿಸಿದ್ದಾರೆ. ಪಾಟೀಲ ಅವರು ನೂತನ ಸರಕಾರದಲ್ಲಿ ಕೈಗಾರಿಕಾ ಇಲಾಖೆಯ ಸಚಿವ ಹುದ್ದೆ ಸ್ವೀಕರಿಸಿದ ಕೆಲದಿನಗಳಲ್ಲೇ ತಮ್ಮ ತವರು ಜಿಲ್ಲೆಯನ್ನು ಕೈಗಾರಿಕಾ ದೃಷ್ಟಿಯಿಂದಲೂ ಮುಂಚೂಣಿಗೆ ತರುವ ಉದ್ದೇಶದಿಂದ ಸಿಬಿಆರ್ ಇ ಸಂಸ್ಥೆಗೆ ವರದಿ ನೀಡುವಂತೆ ಕೋರಿದ್ದನ್ನು ಇಲ್ಲಿ ಸ್ಮರಿಸಬಹುದು.

ವರದಿ ಸ್ವೀಕರಿಸಿ ಮಾತನಾಡಿದ ಸಚಿವರು,'ನಮ್ಮಲ್ಲಿ ಎಲ್ಲ ಉದ್ಯಮಗಳೂ ಬೆಂಗಳೂರಿನಲ್ಲಿ ಕೇಂದ್ರೀಕೃತಗೊಂಡಿವೆ. ಆದರೆ ಬಿಯಾಂಡ್ ಬೆಂಗಳೂರು ಉಪಕ್ರಮದಡಿ ರಾಜಧಾನಿಯ ಆಚೆ-'ಗೂ ಬಂಡವಾಳ ಹೂಡಿಕೆ ಮತ್ತು ಕೈಗಾರಿಕೆಗಳ ಸ್ಥಾಪನೆಗೆ ಹೇರಳ ಅವಕಾಶಗಳಿವೆ. ವಿಜಯಪುರ ಜಿಲ್ಲೆಯಲ್ಲಂತೂ ನೀರು, ವಿದ್ಯುತ್ ಮತ್ತು ಜಮೀನಿನ ಲಭ್ಯತೆಗೆ ಸಮಸ್ಯೆ



ಇಲ್ಲ. ಇದರ ಹಿಂದೆ ಪ್ರಾದೇಶಿಕ ಅಸಮತೋಲನ ನಿವಾರಣೆಯ ಗುರಿಯೂ ಇದೆ' ಎಂದರು.

ವರದಿಯಲ್ಲಿ ಗುರುತಿಸಿರುವ ಆರು ವಲಯಗಳಲ್ಲಿ ಮುಂಚೂಣಿಯಲ್ಲಿರುವ ಕಂಪನಿಗಳನ್ನೂ ಹೇಳಲಾಗಿದೆ. ಇವರನ್ನೆಲ್ಲ ಕರೆಸಿ, ಮುಂದಿನ ಹೆಜ್ಜೆಗಳನ್ನು ಇಡಲಾಗುವುದು. ಒಟ್ಟಿನಲ್ಲಿ ವಿಜಯಪುರವನ್ನು ರಾಜ್ಯದ ಪ್ರಮುಖ ಕೈಗಾರಿಕಾ ತಾಣವನ್ನಾಗಿ ಮಾಡಲಾಗುವುದು. ಈ ಅಧ್ಯಯನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹಸಿರು ನಿಶಾನೆ ತೋರಿಸಿದ್ದರು ಎಂದು ಅವರು ವಿವರಿಸಿದರು.

ಇಂಧನ ಕ್ಷೇತ್ರದ ಸಾಧನ-ಸಲಕರಣೆಗಳ ತಯಾರಿಕೆಯಲ್ಲಿ ವಿಕ್ರಂ ಸೋಲಾರ್, ವೋಲ್ಟಾಸ್, ಶ್ನೀಡರ್ ಎಲೆಕ್ಟ್ರಿಕ್, ಸಾಲಾಸರ್ ಟೆಕ್ನೋ ಎಂಜಿನಿಯರಿಂಗ್ ಲಿಮಿಟೆಡ್ ಕಂಪನಿಗಳನ್ನು ಗುರುತಿಸಲಾಗಿದೆ. ಹಾಗೆಯೇ ಲೋಹೋತ್ಪನ್ನಗಳ ವಲಯದಲ್ಲಿ ಟಾಟಾ ಸ್ಟೀಲ್, ಜಿಂದಾಲ್, ಮಶಿನರಿಯಲ್ಲಿ ಎಬಿಬಿ, ಮುಕುಂದ್ ಬಜಾಜ್ ಮತ್ತು ಸೀಮನ್ಸ್, ನ್ಯೂಟ್ರಾಸ್ಯುಟಿಕಲ್ಸ್ ಕ್ಷೇತ್ರದಲ್ಲಿ ಇಮಾಮಿ, ಹಿಮಾಲಯ ವೆಲ್ನೆಸ್, ನೋವಸ್ ಲೈಫ್ ಸೈನ್ಸಸ್ ಮತ್ತು ಝೋಯಿಕ್ ಫಾರ್ಮಸುಟಿಕಲ್ಸ್ ಕಂಪನಿಗಳನ್ನು ಪರಿಗಣಿಸಲಾಗಿದೆ ಎಂದು ಅವರು ನುಡಿದರು.

ಈ ಕಂಪನಿಗಳು ಉತ್ತಮ ರಸ್ತೆ, ನೀರು, ವಿದ್ಯುತ್, ಕೌಶಲ ಕೇಂದ್ರಗಳು, ತ್ಯಾಜ್ಯ ನಿರ್ವಹಣೆ ವ್ಯವಸ್ಥೆ, ಬಂದರುಗಳ ಲಭ್ಯತೆ ಮುಂತಾದ ಮೂಲಸೌಕರ್ಯಗಳನ್ನು ನಮ್ಮಿಂದ ಕೋರಿವೆ. ಇವುಗಳನ್ನು ಒದಗಿಸಲು ಸರಕಾರವು ತ್ವರಿತ ಗತಿಯಲ್ಲಿ ಕೆಲಸ ಮಾಡಲಿದೆ. ಇದರಿಂದಾಗಿ ಮುಂಬರುವ ದಿನಗಳಲ್ಲಿ ಬಂಡವಾಳ ಹರಿವು ಮತ್ತು ಉದ್ಯೋಗ ಸೃಷ್ಟಿ ಹೆಚ್ಚಳ ಸಾಧ್ಯವಾಗಲಿದೆ ಎಂದು ಪಾಟೀಲ ಹೇಳಿದರು.

ಈ ಸಂದರ್ಭದಲ್ಲಿ ಏಕಸ್ ಇನ್ನಾದ ವ್ಯವಸ್ಥಾಪಕ ನಿರ್ದೇಶಕ ವಿಕ್ರಮ್ ಎಸ್ ಅಣ್ಣಪ್ಪ, ಸಿಬಿಆರ್.ಇ ಸಂಸ್ಥೆಯ ಕಾರ್ಯ ನಿರ್ವಾಹಕ ನಿರ್ದೇಶಕ ಸೌರವ್ ಹಾಜ್ರಾ, ಕೈಗಾರಿಕಾ ಸಚಿವರ ತಾಂತ್ರಿಕ ಸಲಹೆಗಾರ ಅರವಿಂದ ಗಲಗಲಿ ಉಪಸ್ಥಿತರಿದ್ದರು.

# ವಿಜಯಪುರದಲ್ಲಿ ಟಿಪ್ಪುಸುಲ್ತಾನ ಜಯಂತಿ ಇಂದು

**ಉದಯರಶ್ಮಿ ನ್ಯೂಸ್**

ವಿಜಯಪುರ: ನಗರದ ಟಿಪ್ಪು ಸುಲ್ತಾನ ಸರ್ಕಲ್‌ನಲ್ಲಿ ಟಿಎಸ್-ಎಸ್ ಸಂಘಟನೆಯ ವತಿಯಿಂದ ಮೈಸೂರು ಹುಲಿ ಟಿಪ್ಪುಸುಲ್ತಾನ ಅವರ ಜಯಂತಿ ಕಾರ್ಯಕ್ರಮ ನ.10 ರಂದು ಬೆಳಿಗ್ಗೆ 11 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಈ ನಿಮಿತ್ಯ ಟಿಪ್ಪು ಸುಲ್ತಾನ ಅವರ ಭಾವಚಿತ್ರಕ್ಕೆ ಸಾಮೂಹಿಕವಾಗಿ ವಿಶೇಷ ಪೂಜೆ ಸಲ್ಲಿಸಲಾಗುವುದು.

ಈ ಕಾರ್ಯಕ್ರಮದಲ್ಲಿ ಕಾಂಗ್ರೇಸ್ ಪಕ್ಷದ ಮುಖಂಡ ಹಮೀದ್ ಮುಶ್ರೀಫ್, ಹಿರಿಯ ಹೋರಾಟಗಾರ ಭೀಮಶಿ ಕಲಾದಗಿ ಹಾಗೂ ಪ್ರಗತಿಪರ ಸಂಘಟನೆಯ ಮುಖಂಡರು ಭಾಗವಹಿಸಲಿದ್ದಾರೆ ಎಂದು ಟಿಎಸ್‌ಎಸ್ ಇರಫಾನ ಶೇಖ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನ.26ರಂದು ಬೆಳಗಾವಿಯಲ್ಲಿ ಮಾಜಿ ಸೈನಿಕರ ರ‍್ಯಾಲಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಮರಾಠಾ ಲೈಟ್ ಇನ್‌ಫೆಂಟ್ರಿ ಸೆಂಟರ್ ಬೆಳಗಾವಿಯ ಶಿವಾಜಿ ಸ್ಟೇಡಿಯಂನಲ್ಲಿ ಮಾಜಿ ಸೈನಿಕರು, ವೀರ ನಾರಿಯರು ಹಾಗೂ ಮಾಜಿ ಸೈನಿಕರ ವಿಧವಾ ಪತ್ನಿಯ-ರಿಗಾಗಿ ನವೆಂಬರ್ 26 ರಂದು ಬೆಳಿಗ್ಗೆ 8 -30ರಿಂದ ಸಂಜೆ 4 ಗಂಟೆವರೆಗೆ ಮಾಜಿ ಸೈನಿಕರ ರ‍್ಯಾಲಿ ಆಯೋಜಿಸಲಾಗಿದೆ.

ಈ ರ‍್ಯಾಲಿಯಲ್ಲಿ ವಿವಿಧ ಅಭಿಲೇಖ ಕಾರ್ಯಾಲಯಗಳಿಮದ ಸಿಬ್ಬಂದಿಗಳು, ಮಾಜಿ ಸೈನಿಕರು ಹಾಗೂ ಅವರ ಅವಲಂಬಿತರ ಪಿಂಚಣಿ, ಕುಟುಂಬ ಪಿಂಚಣಿಗೆ ಸಂಬಂಧಿಸಿದ ಅಭಿಲೇಖ ಕಾರ್ಯಾಲಯಕ್ಕೆ ಹಾಗೂ ಪಿಂಚಣಿ ಬಟವಡೆ ಬ್ಯಾಂಕಿಗೆ ಸಂಬಂಧಿಸಿದ ಹಾಗೂ ಇತರೆ ಹಲವಾರು ಕುಂದು ಕೊರತೆ ನಿವಾರಿಸುವ ಪ್ರಕ್ರಿಯೆ ನಡೆಯಲಿದೆ. ರ‍್ಯಾಲಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳುವಂತೆ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ವಿಜಯಪುರ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬರ ನಿರ್ವಹಣೆ ಹಾಗೂ ಕುಡಿವ ನೀರಿನ ಅನುಷ್ಠಾನ ಕುರಿತ ವೀಡಿಯೋ ಸಂವಾದ ಸಭೆಯಲ್ಲಿ ಡಿಸಿ ಟಿ.ಭೂಬಾಲನ್ ಸೂಚನೆ

# ಕುಡಿವ ನೀರಿನ ತೊಂದರೆಯಾಗದಂತೆ ಸಮನ್ವಯದಿಂದ ಕಾರ್ಯನಿರ್ವಹಿಸಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲೆಯಲ್ಲಿ ಬರದ ಛಾಯೆ ಇರುವುದರಿಂದ ಕುಡಿಯುವ ನೀರಿನ ತೊಂದರೆಯಾಗದಂತೆ ಎಲ್ಲ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಸಮನ್ವಯದಿಂದ ಕರ್ತವ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ಬೂಬಾಲನ್ ಹೇಳಿದರು.

ಗುರುವಾರ ನಗರದ ಜಿಲ್ಲಾಧಿಕಾ-ರಿಗಳ ಸಭಾಂಗಣದಲ್ಲಿ ಬರ ನಿರ್ವಹಣೆ ಹಾಗೂ ಕುಡಿಯುವ ನೀರಿನ ಅನುಷ್ಠಾನ ಕುರಿತ ವಿಡಿಯೋ ಸಂವಾದದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸರ್ಕಾರ ಈಗಾಗಲೇ ಜಿಲ್ಲೆಯನ್ನು ಬರ ಪೀಡಿತ ಜಿಲ್ಲೆಯನ್ನಾಗಿ ಘೋಷಣೆ ಮಾಡಿದ್ದು ಮುಂಬರು ದಿನಗಳಲ್ಲಿ ಜಿಲ್ಲೆಯ ಪ್ರತಿಯೊಂದು ಗ್ರಾಮಗಳಲ್ಲಿ ಕುಡಿಯುವ ನೀರಿನ ತೊಂದರೆಯಾಗದಂತೆ ಈಗಿನಿಂದಲೇ ಕ್ರಮ ವಹಿಸಬೇಕು ಹಾಗೂ ಕುಡಿಯುವ ನೀರಿಗೆ ಪ್ರಥಮ ಆದ್ಯತೆ ನೀಡಬೇಕು ಎಂದು ಸೂಚಿಸಿದರು.

ಜಿಲ್ಲೆಯಲ್ಲಿ ಪ್ರತಿಯೊಂದು ಗ್ರಾಮಗಳಲ್ಲಿಯೂ ಕುಡಿಯುವ ನೀರು ಕೊರತೆಯಾಗದಂತೆ ಮುನ್ನೆಚ್ಚರಿಕೆ ವಹಿಸಿ ಕರ್ತವ್ಯ ನಿರ್ವಹಿಸಬೇಕು. ಬಹು ಹಳ್ಳಿ ಕುಡಿಯುವ ನೀರಿನ ಯೋಜನೆಯ ಎಲ್ಲ ಕೆರೆಗಳಿಗೆ ನೀರು ಹರಿಸಿ ಜನ ಜಾನುವಾರುಗಳಿಗೆ ಕುಡಿಯುವ ನೀರಿನ ತೊಂದರೆಯಾಗದಂತೆ ನೋಡಿಕೊಳ್ಳಬೇಕು. ಬರ ಹಾಗೂ ಕುಡಿಯುವ ನೀರಿನ ಕುರಿತು ಮಾನ್ಯ ಮುಖ್ಯಮಂತ್ರಿಗಳು ಜಿಲ್ಲಾ ಆಡಳಿತದೊಂದಿಗೆ ಸತತ ಸಂಪರ್ಕ ಸಾಧಿಸಿ ವಿವರವನ್ನು ಪಡೆದಿದ್ದು, ಜಿಲ್ಲಾಡಳಿತ ಕೂಡ ಸಮರ್ಪಕವಾಗಿ ಕರ್ತವ್ಯ ನಿರ್ವಹಿಸುತ್ತಿರುವ ಕುರಿತು ಮನವರಿಕೆ ಮಾಡಲಾಗಿದೆ ಎಂದು ಅವರು ಹೇಳಿದರು.

ಕುಡಿಯುವ ನೀರಿನ ಅಭಾವವಾಗಂತೆ ಕಾಲುವೆ ಮೂಲಕ ಕೆರೆಗಳಿಗೆ ನೀರು ಹರಿಸಲಾಗುತ್ತಿದೆ. ಈ ಸಂದರ್ಭದಲ್ಲಿ ಅಕ್ರಮವಾಗಿ ಕಾಲುವೆಗಳಿಂದ ನೀರು ಎತ್ತುತ್ತಿರುವ ಕುರಿತು ಕಂಡು ಬಂದಿದ್ದು, ತೀವ್ರ ನಿಗಾ ಇರಿಸಿ ಅಕ್ರಮವಾಗಿ ನೀರು ಎತ್ತುವುದನ್ನು ತೆರವುಗೊಳಿಸಿ ಪಂಪಸೆಟ್‌ಗಳನ್ನು ಮುಟ್ಟುಗೋಲು ಹಾಕಿಕೊಳ್ಳಬೇಕು. ಹಾಗೂ ಅಂತಹವರ ವಿರುದ್ಧ ದೂರು ದಾಖಲಿಸಬೇಕು. ಎಲ್ಲ ತಾಲೂಕುಗಳಲ್ಲಿ ಟಾಸ್ಕಫೋರ್ಸ್ ಸಭೆಗಳನ್ನು ಕರೆದು ಕುಡಿಯುವ ನೀರಿನ ಕುರಿತು ತೊಂದರೆಯಾಗದಂತೆ ಅಧಿಕಾರಿಗಳು ತಂಡಗಳನ್ನು ರಚಿಸಿ ಪ್ರತಿನಿತ್ಯ ಕಾಲುವೆಗಳ ಮೇಲೆ ಸಂಚರಿಸಿ ನಿಗಾ ಇಡಬೇಕು ಹಾಗೂ ಅಧಿಕಾರಿಗಳು ಸಮನ್ವಯ ಸಾಧಿಸಿ ಕುಡಿಯುವ ನೀರಿನ ತೊಂದರೆ ಕಂಡು ಬಂದಲ್ಲಿ ತ್ವರಿತಗತಿಯಲ್ಲಿ ಸಮಸ್ಯೆಗಳನ್ನು ಪರಿಹರಿಸಿಕೊಂಡು ನೀರು ಪೂರೈಕೆಗೆ ಕ್ರಮ ವಹಿಸಬೇಕು. ಯಾವುದೇ ಸಂದರ್ಭದಲ್ಲಿ ನೀರು ಪೋಲಾಗದಂತೆ ಕ್ರಮ ವಹಿಸಬೇಕು ಎಂದು ಅವರು ಹೇಳಿದರು.




ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ ಶಿಂಧೆ ಮಾತನಾಡಿ, ಜಿಲ್ಲೆಯಲ್ಲಿ ಪ್ರತಿ ಗ್ರಾಮದಲ್ಲಿ ಜನ ಜಾನುವಾರುಗಳಿಗೆ ಕುಡಿಯುವ ನೀರಿನ ತೊಂದರೆಯಾಗದಂತೆ ಕೆರೆಗಳಿಗೆ ನೀರು ಹರಿಸಲು ಅಗತ್ಯ ಕ್ರಮ ತೆಗೆದುಕೊಳ್ಳಬೇಕು ಕುಡಿಯುವ ನೀರು ಬಿಟ್ಟು ಬೇರೆ ಕಾರ್ಯಗಳಿಗೆ ನೀರು ಉಪಯೋಗಿಸದಂತೆ ಜಾಗೃತಿ ಮೂಡಿಸುವುದರೊಂದಿಗೆ ಕೆರೆಗಳಿಗೆ ಸಮರ್ಪಕವಾಗಿ ನೀರು ಹ-ರಿದುಹೋಗುವಂತೆ ನೋಡಿಕೊಳ್ಳಬೇಕು. ಈ ಕಾರ್ಯದಲ್ಲಿ ಯಾವುದೇ ನಿರ್ಲಕ್ಷ್ಯ ವಹಿಸಬಾರದು. ನಿರ್ಲಕ್ಷ್ಯ ವಹಿಸಿದ ಅಧಿಕಾರಿಗಳನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು. ಇದಕ್ಕೆ ಅವಕಾಶ ನೀಡದೆ ಎಲ್ಲ ಅಧಿಕಾ-ರಿಗಳು ಒಗ್ಗೂಡಿ ಸಮರ್ಪಕವಾಗಿ ಕಾರ್ಯನಿರ್ವಹಿಸಬೇಕು. ಯಾವುದೇ ಸಮಸ್ಯೆಗಳು ಬಂದಲ್ಲಿ ಕೂಡಲೇ ಮೇಲಾಧಿಕಾರಿಗಳ ಗಮನಕ್ಕೆ ತರುವಂತೆ ಅವರು ಸೂಚಿಸಿದರು.

ಜಿಲ್ಲಾ ಪೊಲೀಸ್ ವ-ರಿಷ್ಠಾಧಿಕಾರಿ ಋಷಿಕೇಶ ಸೊನವಾನೆ ಅವರು ಮಾತನಾಡಿ, ಜಿಲ್ಲೆಯಲ್ಲಿ ಕಾಲುವೆ ಉದ್ದಕ್ಕೂ 144 ಕಲಂ ಜಾರಿಯಲ್ಲಿದ್ದು ಮುಂಜಾಗ್ರತೆ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ. ನೀರು ಪೋಲಾಗದಂತೆ ಅಗತ್ಯಕ್ಕನುಗುಣವಾಗಿ ಹೆಚ್ಚುವರಿ ಸಿಬ್ಬಂದಿಗಳನ್ನು ನಿಯೋಜಿಸಲು ಕ್ರಮ ವಹಿಸಲಾಗುವುದು. ಅದರ ಜೊತೆಗೆ ಅಧಿಕಾರಿಗಳು ಕಾಲುವೆ ಮೇಲೆ ಪಂಪಗಳ ಮೂಲಕ ನೀರನ್ನು ಎತ್ತುತ್ತಿರುವ ಪಂಪಗಳನ್ನು ಮುಟ್ಟುಗೋಲು ಹಾಕಿ ಅವರ ವಿರುದ್ಧ ದೂರು ದಾಖಲಿಸಿದಲ್ಲಿ ಅವರ ಮೇಲೆ ಕ್ರಮ ವಹಿಸಲಾಗುವುದು. ನಮ್ಮ ಇಲಾಖೆಯಿಂದ ಎಲ್ಲ ರೀತಿಯಲ್ಲಿಯೂ ಸಹಾಯ ಸಹಕಾರಿ ನೀಡುವುದಾಗಿ ಅಧಿಕಾರಿಗಳಿಗೆ ತಿಳಿಸಿದರು.

ವಿಡೀಯೋ ಸಂವಾದ ಸಭೆಯಲ್ಲಿ ಕೃಷ್ಣಾ ಭಾಗ್ಯ ಜಲ ನಿಗಮದ ಮುಖ್ಯ ಇಂಜಿನೀಯರ ಶ್ರೀನಿವಾಸ, ಕೃಷ್ಣಾ ಭಾಗ್ಯ ಜಲ ನಿಗಮದ ರಾಂಪುರ ವಿಭಾಗದ ಮುಖ್ಯ ಇಂಜಿನೀಯರ ಎಚ್ ರವಿಶಂಕರ, ಕರ್ನಾಟಕ ನೀರಾವರಿ ನಿಗಮದ ಇ.ಇ. ಎಚ್.ಜಿ ಶ್ರೀನಾಥ, ಡ್ಯಾಂ ವಿಭಾಗದ ಇ.ಇ ಬಸವರಾಜ, ಹೆಸ್ಕಂ ಮುಖ್ಯ ಅಭಿಯಂತರರಾದ ಗೋಟ್ಯಾಳ, ಉಪವಿಭಾಗಾಧಿಕಾರಿ ಕಲಶೆಟ್ಟಿ, ತಹಶೀಲ್ದಾರರು, ತಾಲೂಕು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ನೀರಾವರಿ ಇಲಾಖೆ, ಮಹಾನಗರ ಪಾಲಿಕೆ, ನಗರಾಭಿವೃದ್ಧಿ ಕೋಶ, ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಬ.ಬಾಗೇವಾಡಿ ಅಥವಾ ಮುದ್ದೇಬಿಹಾಳ ಜಿಲ್ಲಾ ಕೇಂದ್ರವಾಗಿಸಲು ಆಗ್ರಹ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಬಸವನ ಬಾಗೇವಾಡಿ ಅಥವಾ ಮುದ್ದೇಬಿಹಾಳ ತಾಲೂಕುಗಳ ಪೈಕಿ ಯಾವುದಾದರೂ ಒಂದನ್ನು ಜಿಲ್ಲಾ ಕೇಂದ್ರವನ್ನಾಗಿ ಘೋಷಿಸಬೇಕು ಎಂದು ಬ್ಲಾಕ್ ಕಾಂಗ್ರೇಸ್ ಅಧ್ಯಕ್ಷ ಗುರು ತಾರನಾಳ ಆಗ್ರಹಿಸಿದ್ದಾರೆ.

ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಎರಡೂ ತಾಲೂಕುಗಳು ಶೈಕ್ಷಣಿಕ ಮತ್ತು ಭೌಗೋಳಿಕ ವಾಗಿ ಸಾಕಷ್ಟು ವಿಶಾಲವಾಗಿವೆ. ಮುದ್ದೇಬಿಹಾಳ ತಾಲೂಕು ಐತಿಹಾಸಿಕ ಕುರುಹುಗಳನ್ನು ಹೊಂದಿದೆ. ಬಸವನ ಬಾಗೇವಾಡಿ ಕೂಡಾ ಯಾವುದರಲ್ಲಿಯೂ ಕಮ್ಮಿ ಇಲ್ಲ ಅನ್ನಿಸಿಕೊಂಡಿದೆ. ಈ ಎರಡೂ ತಾಲೂಕುಗಳು ಅಂತರಾಷ್ಟ್ರೀಯ ಮಟ್ಟದಲ್ಲಿ ಹೆಸರು ಗುರ್ತಿಸಿಕೊಂಡಿವೆ. ಎರಡೂ ಕೇಂದ್ರಗಳಲ್ಲಿ ಜಿಲ್ಲೆಗೆ ಅಗತ್ಯವಿರುವ ಎಲ್ಲ ಮೂಲ ಸೌಲಭ್ಯಗಳಿವೆ.

ಮುಖ್ಯವಾಗಿ ಈ ಭಾಗದ ಜನ ವಿವಿಧ ಕಾರ್ಯಗಳಿಗೆ ಜಿಲ್ಲೆಗೆ ತೆರಳಬೇಕಾದರೆ ಸಧ್ಯ 80 ಕಿ.ಮೀ ದೂರ ಕ್ರಮಿಸಬೇಕು. ದಿನಂಪ್ರತಿ ಈ ಭಾಗದ ಜನ ಜಿಲ್ಲಾ ಕೇಂದ್ರಕ್ಕೆ ಹೋಗಬೇಕೆಂದರೆ ಅಂದಾಜು 3 ತಾಸು ಪ್ರಯಾಣ ಬೆಳೆಸಬೇಕು. ಹೋಗಲು 3 ತಾಸು ಬರಲು 3 ಹೀಗೆ ಇಡೀ ದಿನ ಬರೀ ಪ್ರಯಾಣ-ಕ್ಕೆ ಕಾಲಹರಣ ಮಾಡಬೇಕಾದ ಅನಿವಾರ್ಯತೆ ಎದುರಾಗಿದೆ. ಸುತ್ತಮುತ್ತ ದೊಡ್ಡ ಪಟ್ಟಣಗಳನ್ನು, ಕೈಗಾರಿಕಾ ಪ್ರದೇಶಗಳನ್ನು ಸೇರಿದಂತೆ ಎಲ್ಲ ತರಹದ ಸೌಲಭ್ಯಗಳನ್ನು ಈ ಎರಡೂ ತಾಲೂಕುಗಳು ಒಳಗೊಂಡಿದ್ದು ಬಹುದಿನಗಳಿಂದಲೂ ಈ ಭಾಗದ ಜನರ ಬಹುಮುಖ್ಯ ಜಿಲ್ಲಾ ಬೇಡಿಕೆಯಾಗಿರುವ ಮುದ್ದೇಬಿಹಾಳ ಅಥವಾ ಹತ್ತಿರದ 40 ಕಿ.ಮೀ ವ್ಯಾಪ್ತಿಯ ಬಸವನ ಬಾಗೇವಾಡಿಯನ್ನು ಜಿಲ್ಲಾ ಕೇಂದ್ರವನ್ನಾಗಿ ಘೋಷಿಸಿದಲ್ಲಿ ಸಾಕಷ್ಟು ಅನುಕೂಲಗಳಾಗಲಿವೆ ಎಂದರು.

# ಕಾನೂನು ಸೇವಾ ಪ್ರಾಧಿಕಾರದ ಸದ್ಬಳಕೆ ಮಾಡಿಕೊಳ್ಳಿ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಭಾರತದ ಪ್ರತಿಯೊಬ್ಬ ಪ್ರಜೆ ಕಾನೂನುಗಳ ಬಗ್ಗೆ ತಿಳಿದುಕೊಳ್ಳಬೇಕು. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಕಾನೂನಿನ ಅರಿವು ಮೂಡಿಸಿ ದುರ್ಬಲ ವ್ಯಕ್ತಿಗಳಿಗೆ ಪ್ರಾಧಿಕಾರದಿಂದ ದೊರೆಯುವ ಎಲ್ಲ ಸೌಲಭ್ಯಗಳನ್ನು ಒದಗಿಸುವದು ಕಾನೂನು ಸೇವೆಗಳ ಪ್ರಾಧಿಕಾರದ ಮುಖ್ಯ ಉದ್ದೇಶವಾಗಿದೆ ಎಂದು ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶೆ ಹಾಗೂ ತಾಲೂಕು ಕಾನೂನು ಸೇವಾ ಸಮಿತಿಯ ಅಧ್ಯಕ್ಷೆ ಲಕ್ಷ್ಮೀ ನಿಂಗಪ್ಪ ಗರಗ ಹೇಳಿದರು.




ಪಟ್ಟಣದ ನ್ಯಾಯಾಲಯದಲ್ಲಿ ತಾಲೂಕು ಕಾನೂನು ಸೇವಾ ಸಮಿತಿ, ನ್ಯಾಯವಾದಿಗಳ ಸಂಘ ಹಾಗೂ ಇತರೆ ಎಲ್ಲ ಸರಕಾರಿ ಇಲಾಖೆಗಳ ಸಂಂ-ಯುಕ್ತ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ರಾಷ್ಟ್ರೀಯ ಕಾನೂನು ಸೇವೆಗಳ ದಿನಾಚರಣೆ ಕುರಿತು ಅರಿವು ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಮಾಜದ ಯಾವುದೇ ವ್ಯಕ್ತಿಗೆ ಕಾನೂನಿನ ಅವಶ್ಯಕತೆ ಇದ್ದಲ್ಲಿ ಹತ್ತಿರದ ಕಾನೂನು ಸೇವಾ ಸಮಿತಿಗೆ ಭೇಟಿ ನೀಡಿ ಉಚಿತವಾಗಿ ಕಾನೂನಿನ ನೆರವು ಪಡೆದುಕೊಳ್ಳಲು ಅವಕಾಶಗಳನ್ನು ಕಲ್ಪಿಸಲಾಗಿದೆ. ನ್ಯಾಯಾಲಯದ ಪ್ರಕರಣಗಳಲ್ಲಿಯೂ ಉಚಿತ ನೆರವು ಪಡೆದುಕೊಳ್ಳಬಹುದಾಗಿದೆ. ಯಾವುದೇ ಶುಲ್ಕ ನೀಡುವ ಅವಶ್ಯಕತೆ ಇರುವದಿಲ್ಲ. ಪ್ರಾಧಿಕಾರದ ವತಿಯಿಂದಲೇ ನು-ರಿತ ಒಬ್ಬ ನ್ಯಾಯವಾದಿಯನ್ನು ನೇಮಿಸಿ ಅವರ ಗೌರವ ಧನವನ್ನು ಪ್ರಾಧಿಕಾರದಿಂದಲೇ ನೀಡಲಾಗುತ್ತದೆ. ಪ್ರಾಧಿಕಾರದ ಸದ್ಬಳಕೆ ಮಾಡಿಕೊಳ್ಳಲು ಸಾರ್ವಜನಿಕರು ಮುಂದಾಗಬೇಕು ಎಂದರು.

ಕಾನೂನು ಸೇವಗಳ ಕುರಿತು ಹಿರಿಯ ನ್ಯಾಯವಾದಿ ಬಿ.ಆರ್.ನಾಡಗೌಡರ ವಿಶೇಶ ಉಪನ್ಯಾಸ ನೀಡಿದರು. ನ್ಯಾಯವಾದಿಗಳ ಸಂಘದ ಅಧ್ಯಕ್ಷ ಎಸ್.ಎಸ್.ಮಾಲಗತ್ತಿ ಮಾತನಾಡಿದರು. ಕಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶ ಹಾಗೂ ತಾಲೂಕು ಕಾನೂನು ಸೇವಾ ಸಮಿತಿಯ ಸದಸ್ಯ ಕಾರ್ಯದರ್ಶಿ ಸಂಪತ್ತಕುಮಾರ ಬಳೂಲಗಿಡದ, ಸಹಾಯಕ ಸರ್ಕಾರಿ ಅಭಿಯೋಜಕ ಬಸವರಾಜ ಆಹೇರಿ, ಅಪರ ಸರ್ಕಾರಿ ವಕೀಲ ಎಂ.ಆರ್.ಪಾಟೀಲ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಶಿವಮೂರ್ತಿ ಕುಂಬಾರ, ಶಿಕ್ಷಣ ಸಂಯೋಜಕ ಎಚ್.ಎ.ಮೇಟಿ, ತಾ.ಪಂ ನ ನಿರ್ಮಲಾ ತೋಟದ, ನ್ಯಾಯಾಲಯದ ಸಿಬ್ಬಂದಿಗಳಾದ ಅರವಿಂದ ಕುಂಬಾರ, ವಿಜು ಶಿವಣಗಿ, ಮಹಾಂತೇಶ ಹಚರಡ್ಡಿ, ಇಸಾಕ್ ಒಂಟಿ, ಹಿರಿಯ ಮತ್ತು ಕಿರಿಯ ನ್ಯಾಯವಾದಿಗಳು, ಪಕ್ಷಗಾರರು ಇದ್ದರು.

ನ್ಯಾಯವಾದಿಗಳ ಸಂಘದ ಕಾರ್ಯದರ್ಶಿ ಪಿ.ಬಿ.ಗೌಡರ ಕಾರ್ಯಕ್ರಮ ನಿರ್ವಹಿಸಿದರು.

ಕಾನೂನು ಸೇವಾ ಪ್ರಾಧಿಕಾರದ ಸದ್ಬಳಕೆ ಮಾಡಿಕೊಳ್ಳಿ

ಉದಯರಶ್ಮಿ ನ್ಯೂಸ್

ಮುದ್ದೇಬಿಹಾಳ: ಭಾರತದ ಪ್ರತಿಯೊಬ್ಬ ಪ್ರಜೆ ಕಾನೂನುಗಳ ಬಗ್ಗೆ ತಿಳಿದುಕೊಳ್ಳಬೇಕು. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಕಾನೂನಿನ ಅರಿವು ಮೂಡಿಸಿ ದುರ್ಬಲ ವ್ಯಕ್ತಿಗಳಿಗೆ ಪ್ರಾಧಿಕಾರದಿಂದ ದೊರೆಯುವ ಎಲ್ಲ ಸೌಲಭ್ಯಗಳನ್ನು ಒದಗಿಸುವದು ಕಾನೂನು ಸೇವೆಗಳ ಪ್ರಾಧಿಕಾರದ ಮುಖ್ಯ ಉದ್ದೇಶವಾಗಿದೆ ಎಂದು ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶೆ ಹಾಗೂ ತಾಲೂಕು ಕಾನೂನು ಸೇವಾ ಸಮಿತಿಯ ಅಧ್ಯಕ್ಷೆ ಲಕ್ಷ್ಮೀ ನಿಂಗಪ್ಪ ಗರಗ ಹೇಳಿದರು.

ಪಟ್ಟಣದ ನ್ಯಾಯಾಲಯದಲ್ಲಿ ತಾಲೂಕು ಕಾನೂನು ಸೇವಾ ಸಮಿತಿ, ನ್ಯಾಯವಾದಿಗಳ ಸಂಘ ಹಾಗೂ ಇತರೆ ಎಲ್ಲ ಸರಕಾರಿ ಇಲಾಖೆಗಳ ಸಂಂ-ಯುಕ್ತ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ರಾಷ್ಟ್ರೀಯ ಕಾನೂನು ಸೇವೆಗಳ ದಿನಾಚರಣೆ ಕುರಿತು ಅರಿವು ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಮಾಜದ ಯಾವುದೇ ವ್ಯಕ್ತಿಗೆ ಕಾನೂನಿನ ಅವಶ್ಯಕತೆ ಇದ್ದಲ್ಲಿ ಹತ್ತಿರದ ಕಾನೂನು ಸೇವಾ ಸಮಿತಿಗೆ ಭೇಟಿ ನೀಡಿ ಉಚಿತವಾಗಿ ಕಾನೂನಿನ ನೆರವು ಪಡೆದುಕೊಳ್ಳಲು ಅವಕಾಶಗಳನ್ನು ಕಲ್ಪಿಸಲಾಗಿದೆ. ನ್ಯಾಯಾಲಯದ ಪ್ರಕರಣಗಳಲ್ಲಿಯೂ ಉಚಿತ ನೆರವು ಪಡೆದುಕೊಳ್ಳಬಹುದಾಗಿದೆ. ಯಾವುದೇ ಶುಲ್ಕ ನೀಡುವ ಅವಶ್ಯಕತೆ ಇರುವದಿಲ್ಲ. ಪ್ರಾಧಿಕಾರದ ವತಿಯಿಂದಲೇ ನು-ರಿತ ಒಬ್ಬ ನ್ಯಾಯವಾದಿಯನ್ನು ನೇಮಿಸಿ ಅವರ ಗೌರವ ಧನವನ್ನು ಪ್ರಾಧಿಕಾರದಿಂದಲೇ ನೀಡಲಾಗುತ್ತದೆ. ಪ್ರಾಧಿಕಾರದ ಸದ್ಬಳಕೆ ಮಾಡಿಕೊಳ್ಳಲು ಸಾರ್ವಜನಿಕರು ಮುಂದಾಗಬೇಕು ಎಂದರು.

ಕಾನೂನು ಸೇವಗಳ ಕು-ರಿತು ಹಿರಿಯ ನ್ಯಾಯವಾದಿ ಬಿ.ಆರ್.ನಾಡಗೌಡರ ವಿಶೇಶ ಉಪನ್ಯಾಸ ನೀಡಿದರು. ನ್ಯಾಯವಾದಿಗಳ ಸಂಘದ ಅಧ್ಯಕ್ಷ ಎಸ್.ಎಸ್.ಮಾಲಗತ್ತಿ ಮಾತನಾಡಿದರು. ಕಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶ ಹಾಗೂ ತಾಲೂಕು ಕಾನೂನು ಸೇವಾ ಸಮಿತಿಯ ಸದಸ್ಯ ಕಾರ್ಯದರ್ಶಿ ಸಂಪತ್ತಕುಮಾರ ಬಳೂಲಗಿಡದ, ಸಹಾಯಕ ಸರ್ಕಾರಿ ಅಭಿಯೋಜಕ ಬಸವರಾಜ ಆಹೇರಿ, ಅಪರ ಸರ್ಕಾರಿ ವಕೀಲ ಎಂ.ಆರ್.ಪಾಟೀಲ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಶಿವಮೂರ್ತಿ ಕುಂಬಾರ, ಶಿಕ್ಷಣ ಸಂಯೋಜಕ ಎಚ್.ಎ.ಮೇಟಿ, ತಾ.ಪಂ ನ ನಿರ್ಮಲಾ ತೋಟದ, ನ್ಯಾಯಾಲಯದ ಸಿಬ್ಬಂದಿಗಳಾದ ಅರವಿಂದ ಕುಂಬಾರ, ವಿಜು ಶಿವಣಗಿ, ಮಹಾಂತೇಶ ಹಚರಡ್ಡಿ, ಇಸಾಕ್ ಒಂಟಿ, ಹಿರಿಯ ಮತ್ತು ಕಿರಿಯ ನ್ಯಾಯವಾದಿಗಳು, ಪಕ್ಷಗಾರರು ಇದ್ದರು.

ನ್ಯಾಯವಾದಿಗಳ ಸಂಘದ ಕಾರ್ಯದರ್ಶಿ ಪಿ.ಬಿ.ಗೌಡರ ಕಾರ್ಯಕ್ರಮ ನಿರ್ವಹಿಸಿದರು.

# ಹೊನ್ನಳ್ಳಿ ಕೆರೆಗೆ ತಾಪಂ ಇಓ ರಾಮೋಜಿ ಭೇಟಿ-ಪರಿಶೀಲನೆ

**ಉದಯರಶ್ಮಿ ನ್ಯೂಸ್**

ಬ್ರಹ್ಮದೇವನಮಡು: ತೀವ್ರ ಬರ ಪರಿಸ್ಥಿತಿ ಇರುವುದರಿಂದ ಜನ- ಜಾನುವಾರು ಕುಡಿಯುವ ನೀರಿನ ಸಮಸ್ಯೆಯಾಗದಂತೆ ಮುಂಜಾಗೃತೆಯಿಂದ ಕ್ರಮ ಕೈಗೊಳ್ಳಬೇಕು ಎಂದು ಸಿಂದಗಿ ತಾಪಂ ಇಓ ರಾಮೋಜಿ ಅಗ್ನಿ ಹೇಳಿದರು.

ಸಿಂದಗಿ ತಾಲೂಕು ಹೊನ್ನಳ್ಳಿ ಕೆರೆಗೆ ಮಂಗಳವಾರ ಸಂಜೆ ಭೇಟಿ ನೀಡಿ ಪರಿಶೀಲಿಸಿ ಮಾತನಾಡಿದರು.

ಹೊನ್ನಳ್ಳಿ ಗ್ರಾಪಂ ವ್ಯಾಪ್ತಿಯ ಹಳ್ಳಿಗಳಲ್ಲಿ ಕುಡಿಯುವ ನೀರಿನ ತೊಂದರೆ ಆಗದಂತೆ ಪಿಡಿಒಗಳು ನೋಡಿಕೊಳ್ಳಬೇಕು.ನೀರಿನ ಸಮಸ್ಯೆ ಕಂಡು ಬಂದರೆ ಪ್ರಯಾ9ಯ ವ್ಯವಸ್ಥೆಗೆ ನೀವೇ ಸಲಹೆ ನೀಡಬೇಕು ಎಂದರು.



ಸಿಂದಗಿ ಕುಡಿಯುವ ನೀರು ನೈವು9ಲ್ಯ ಇಲಾಖೆ ಎಇಇ ಮಂಜುನಾಥಸ್ವಾಮಿ, ತಾಪಂ ಇಡಿ ನಿತ್ಯಾನಂದ ಯಲಗೋಡ, ಗ್ರಾಪಂ ಅಧ್ಯಕ್ಷರ ಪ್ರತಿನಿಧಿ ಹಣಮಂತ್ರಾಯಗೌಡ ಬಿರಾದಾರ, ಗ್ರಾಪಂ ಪಿಡಿಒ ಎಸ್.ಸಿ.ನಾಯ್ಕೋಡಿ, ಯಂಕಂಚಿ ಪಿಡಿಒ ಸಂಜೀವಕುಮಾರ ದೊಡ್ಡಮನಿ, ಸಾಹೇಪಟೇಲ ಮುರಡಿ, ಹಣಮಂತ ಯಂಟಮಾನ, ಮಲ್ಲು ಕೆಂಭಾವಿ ಸೇರಿದಂತೆ ಮತ್ತಿತರಿದ್ದರು.

# ಬರ ಪರಿಶೀಲನೆಗೆ ಬಂದು ಬಡಿದಾಡಿದ ಬಿಜೆಪಿ ಮುಖಂಡರು

**ಉದಯರಶ್ಮಿ ನ್ಯೂಸ್**

ರಾಮನಗರ: ಬರ ಪ್ರದೇಶ ಪರಿಶೀಲನೆಯ ಸಮಯದಲ್ಲಿ ಬಿಜೆಪಿ ನಾಯಕರು ಪರಸ್ಪರ ಬಡಿದಾಡಿಕೊಂಡಿರ ಘಟನೆ ರೇಷ್ಮೆನಾಡು ರಾಮನಗರದಲ್ಲಿ ನಡೆದಿದೆ.

ವಿಧಾನಪರಿಷತ್ ಸದಸ್ಯ ಕೋಟಾ ಶ್ರೀನಿವಾಸ ಪೂಜಾರಿ ನೇತೃತ್ವದಲ್ಲಿ ಇಂದು ರಾಮನಗರ ಜಿಲ್ಲೆಯಲ್ಲಿ ಬರ ಅಧ್ಯಯನ ಕೈಗೊಂಡಿದ್ದ ಸಮಯದಲ್ಲಿ ವಿಧಾನಪರಿಷತ್ ಸದಸ್ಯ ದೇವೇಗೌಡ ಹಾಗೂ ಚನ್ನಪಟ್ಟಣ ಬಿಜೆಪಿ ತಾಲೂಕು ಘಟಕದ ಅಧ್ಯಕ್ಷರ ನಡುವೆ ಗಲಾಟೆ ನಡೆದಿದೆ.

ವಿಧಾನ ಪರಿಷತ್ ಸದಸ್ಯ ಅ.ದೇವೇಗೌಡ ಬಹಿರಂಗವಾಗಿಯೇ ತಮ್ಮ ಪಕ್ಷದ ಮುಖಂಡನಿಗೆ ಕಪಾಳ ಮೋಕ್ಷ ಮಾಡಿದ್ದಾರೆ.

ರಾಮನಗರದ ವಿಭೂತಿ ಕೆರೆ ಗ್ರಾಮದಲ್ಲಿ ಬರ ಅಧ್ಯಯನಕ್ಕೆ ವಿಭೂತಿಕೆರೆ ಗ್ರಾಮಕ್ಕೆ ವಿಧಾನಪರಿಷತ್ ಸದಸ್ಯ ಕೋಟಾ ಶ್ರೀನಿವಾಸ ಪೂಜಾರಿ ನೇತೃತ್ವದಲ್ಲಿ ವಿಧಾನ ಪರಿಷತ್ ಸದಸ್ಯ ಅ.ದೇವೇಗೌಡ, ಜಿಲ್ಲಾ ಬಿಜೆಪಿ ಅಧ್ಯಕ್ಷ ಹುಲುವಾಡಿ ದೇವರಾಜ್, ತಾಲೂಕು ಅಧ್ಯಕ್ಷರು ಹಾಗೂ ಬಿಜೆಪಿ ಮುಖಂಡರ ಒಳಗೊಂಡ ತಂಡ ಭೇಟಿ ನೀಡಿದರು. ರೈತ ಜಮೀನಿಗೆ ಭೇಟಿ ನೀಡಿ ಮಳೆ ಕೊರತೆಯಿಂದಾಗಿ ಹಾನಿಗೀಡಾದ ರಾಗಿ ಬೆಳೆಯನ್ನು ಪರಿಶೀಲನೆ ನಡೆಸಿ ರೈತರಿಂದ ಮಾಹಿತಿ ಪಡೆದುಕೊಂಡರು.



ನೊಂದ ರೈತರೊಂದಿಗೆ ಸಂವಾದ ನಂತರ ಮಾಧ್ಯಗಳೊಂದಿಗೆ ಮಾಹಿತಿ ಹಂಚಿಕೊಂಡ ನಂತರ ಸ್ಥಳೀಯ ಬಿಜೆಪಿ ಮುಖಂಡರ ಮನೆಗೆ ತೆರಳಿದರು. ಸ್ಥಳೀಯ ಮುಖಂಡರ ಮನೆಯಿಂದ ಹೊರ ಬರುವ ಸಮಯದಲ್ಲಿ ಮುಂಬರುವ ಪದವೀಧರ ಚುನಾವಣೆ ವಿಚಾರವಾಗಿ ದೇವೇಗೌಡ ಹಾಗೂ ಜಯರಾಮ್ ನಡುವೆ ಮಾತಿಗೆ ಮಾತು ಬೆಳೆದಿದೆ. ಈ ವೇಳೆ ತಮ್ಮ ಪಕ್ಷದ ಮುಖಂಡ ಜಯರಾಮ್ ಕಪಾಳಕ್ಕೆ ಬಾರಿಸಿದ್ದಾರೆ. ಅಲ್ಲದೇ ಪರಸ್ಪರ ಕೈ ಕೈ ಮಿಲಾಯಿಸಿದ್ದಾರೆ. ಬಳಿಕ ಇಬ್ಬರನ್ನು ಸ್ಥಳೀಯ ನಾಯಕರು ಸಮಾಧಾನಪಡಿಸಿದ್ದಾರೆ.

ಆ.ದೇವೇಗೌಡರ ವಿರುದ್ಧ ಪಕ್ಷಕ್ಕೆ ದೂರು ಕೊಡಲು ನಿರ್ಧಾರ

ಚನ್ನಪಟ್ಟಣ ತಾಲೂಕು ಬಿಜೆಪಿ ಅಧ್ಯಕ್ಷ ಕೆಲಗೆರೆ ಜಯರಾವ್ ತಮ್ಮ ಮೇಲೆ ಆ.ದೇವೇಗೌಡ ಹಲ್ಲೆ ಮಾಡಿದ ಬಗ್ಗೆ ಮಾಧ್ಯಮಗಳಿಗೆ ಹೇಳಿಕೆ ನೀಡಿದ್ದಾರೆ. ನಾನು ಪಕ್ಷದ ನಿಷ್ಠಾವಂತ ಕಾರ್ಯಕರ್ತನಾಗಿ ಅ.ದೇವೇಗೌಡ ಪರ ವರಿಗಾಗಿ ದುಡಿಮೆ ಮಾಡಿದ್ದೇನೆ. ಅವರ ವಿಧಾನ ಪರಿಷತ್ ಚುನಾವಣೆಯಲ್ಲಿ ಅವರಿಗೆ ಮತಹಾಕಿಸಿದ್ದೇನೆ. ನಾನು ಅವರಿಗಾಗಿ ದುಡಿದ ಪ್ರತಿಫಲವಾಗಿ ಇಂದು ನನ್ನ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

ಎಲ್‌ಎಲ್‌ಸಿ ಚುನಾವಣೆ ವಿಚಾರವಾಗಿ ಮಾತನಾಡುತ್ತಾ ಹೊಡೆದರು. ಇದು ನನಗೆ ಬಹಳ ದುಃಖವಾಗಿದೆ. ನಾನು ಈ ಘಟನೆಯ ಬಗ್ಗೆ ಪಕ್ಷದ ರಾಜ್ಯಾಧ್ಯಕ್ಷರಿಗೆ ದೂರು ಕೊಡುತ್ತೇನೆ. ನಾನು 30 ವರ್ಷದಿಂದ ಪಕ್ಷಕ್ಕೆ ದುಡಿಮೆ ಮಾಡಿದ್ದೇನೆ. ಆದರೆ ಇಂತಹ ಕೃತ್ಯ ಮುಂದೆ ಯಾರಿಗೂ ಆಗಬಾರದು. ಅವರಿಗೆ ಪಕ್ಷದಲ್ಲಿ ಯಾವ ರೀತಿ ತೊಂದರೆ ಆಗುತ್ತಿದೆಯೋ ಗೊತ್ತಿಲ್ಲ. ಈ ರೀತಿ ನಡೆದುಕೊಂಡದ್ದು ತಪ್ಪು ಎಂದು ಚನ್ನಪಟ್ಟಣ ತಾಲೂಕು ಬಿಜೆಪಿ ಅಧ್ಯಕ್ಷ ಕೆಲಗೆರೆ ಜಯರಾಮ್ ಹೇಳಿಕೆ ನೀಡಿದ್ದಾರೆ.

ರಾಷ್ಟ್ರೀಯ ಕಾನೂನು ಸೇವೆಗಳ ದಿನಾಚರಣೆ | ಅರೆಕಾಲಿಕ ಸ್ವಯಂಸೇವಕರಿಗೆ ತರಬೇತಿ | ನ್ಯಾ.ಶಿವಾಜಿ ನಲವಡೆ ಆಶಯ

# ಅಸಹಾಯಕರಿಗೆ ಉಚಿತ ಕಾನೂನು ಅರಿವು-ನೆರವು ತಲುಪಲಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಸಮಾಜದ ಕಟ್ಟಕಡೆಯ ವ್ಯಕ್ತಿಗೆ, ಅಸಹಾಯಕರಿಗೆ ಉಚಿತ ಕಾನೂನು ಅರಿವು ಮತ್ತು ನೆರವು ತಲುಪುವಂತೆ ನೋಡಿಕೊಳ್ಳುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದ್ದು, ಕಾನೂನಿನ ಸೇವೆಯಲ್ಲಿರುವ ಪ್ರತಿಯೊಬ್ಬ ಅಧಿಕಾರಿ ಜವಾಬ್ದಾರಿಯುತವಾಗಿ, ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಪ್ರಧಾನ ಜಿಲ್ಲಾ, ಮತ್ತು ಸತ್ರ ನ್ಯಾಯಾಧೀಶರು ಹಾಗೂ ಅಧ್ಯಕ್ಷ ಶಿವಾಜಿ ಅನಂತ ನಲವಡೆ ಹೇಳಿದರು.

ನಗರದ ಜಿಲ್ಲಾ ನ್ಯಾಯಾಲಯ ಆವರಣದ ನ್ಯಾಯಾಂಗ ಅಧಿಕಾರಿಗಳ ಸಭಾ ಭವನದಲ್ಲಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವಿಜಯಪುರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಪೋಲಿಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ವಕೀಲರ ಸಂಘ ವಿಜಯಪುರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡ ರಾಷ್ಟ್ರೀಯ ಕಾನೂನು ಸೇವೆಗಳ ದಿನಾಚರಣೆ ಮತ್ತು ಅರೆಕಾಲಿಕ ಸ್ವಯಂಸೇವಕರಿಗೆ ಒಂದು ದಿನದ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರಗಳ ಕಾಯಿದೆಯಡಿಯಲ್ಲಿ, ಸಮಾಜದ ದುರ್ಬಲ ವರ್ಗದವರಿಗೆ ಉಚಿತ ಕಾನೂನು ಸೇವೆಗಳ ನೆರವಿನ ಲಭ್ಯತೆಯ ಬಗ್ಗೆ ಜನರಲ್ಲಿ ಅರಿವು ಮೂಡಿಸಲು ಪ್ರತಿವರ್ಷ ನವೆಂಬರ್ 09 ರಂದು ರಾಷ್ಟ್ರೀಯ ಕಾನೂನು ಸೇವೆಗಳ ದಿನವನ್ನು ಆಚರಿಸಲಾಗುತ್ತದೆ.

ಜನರಿಗೆ ಕಾನೂನು ತಿಳುವಳಿಕೆ ನೀಡುವುದು ಮತ್ತು ಬಡವರಿಗೆ ಕಾನೂನಿನ ಅರಿವಿನ ಜೊತೆಗೆ ನೆರವು ನೀಡುವ ಉದ್ದೇಶದಿಂದ ಕಾನೂನು ಸೇವೆಗಳ ಕಾಯಿದೆ ಜಾರಿಗೆ ಬಂದಿದ್ದು, ಈಗ ಪ್ರಾಧಿಕಾರವು ಕಾನೂನು ತಿಳುವಳಿಕೆ ನೀಡುವುದು ಮಾತ್ರವಲ್ಲದೆ ಸರಕಾರದಿಂದ ವಿವಿಧ ಇಲಾಖೆಗಳ ಮೂಲಕ ಯಾವ ಸೌಲಭ್ಯಗಳು ಸಿಗುತ್ತಿವೆ ಎಂಬ ಮಾಹಿತಿಗಳನ್ನು ಕೂಡ ಸಾರ್ವಜನಿಕರಿಗೆ ನೀಡಲಾಗುತ್ತಿದೆ. 1987 ರಲ್ಲಿ ಕಾನೂನು ಸೇವೆಗಳ ಪ್ರಾಧಿಕಾರ ಜಾರಿಗೆ ಬಂದ ನಂತರ ಜನರಲ್ಲಿ ಕಾನೂನಿನ ಅರಿವು ಹೆಚ್ಚಾಗಿದೆ ಮತ್ತು ಆರ್ಥಿಕವಾಗಿ ಹಿಂದುಳಿದವರಿಗೆ ಜಾತಿ-ಧರ್ಮರಹಿತವಾಗಿ ಕಾನೂನಿನ




ನೆರವು ಸಿಗುತ್ತದೆ ಎಂದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ ಅವರು ಮಾತನಾಡಿ, ಪ್ರತಿಯೊಬ್ಬರು ಸಮಾಜದ ಬದಲಾವಣೆಯನ್ನು ಬಯಸುವುದರಿಂದ ಸಮಾಜವು ಸಾಮಾಜಿಕವಾಗಿ, ಆರ್ಥಿಕವಾಗಿ, ಶೈಕ್ಷಣಿಕವಾಗಿ ಧಾರ್ಮಿಕವಾಗಿ ಅಭಿವೃದ್ಧಿ ಹೊಂದಬೇಕು. ಕಾನೂನಿನ ಮೂಲಕ ಸಮಾಜದ ರಕ್ಷಣೆ ಮಾಡಬಹುದು. ಪ್ರತಿಯೊಬ್ಬರೂ ಕಾನೂನುಗಳನ್ನು ಪಾಲಿಸಿ, ಗೌರವಿಸಿ ಪರಿಪಾಲನೆ ಮಾಡುವ ಮೂಲಕ ಅದರ ಸದುಪಯೋಗ ಪಡಿಸಿಕೊಳ್ಳಬೇಕು.

ಪಾಲಕರು, ಪೋಷಕರು ತಮ್ಮ ಮಕ್ಕಳ ಬಗ್ಗೆ ವಿಶೇಷ ಗಮನ ಹರಿಸಬೇಕು. ಮಕ್ಕಳ ಸಂರಕ್ಷಣೆ ಮಾಡುವ ಜವಾಬ್ದಾರಿ ಕುಟುಂಬದ ಮೇಲಿದ್ದರು ಕೂಡ ಪ್ರತಿಯೊಬ್ಬ ನಾಗರೀಕರು, ಪಾಲಕರು ಕಾನೂನಿನ ಬಗ್ಗೆ ಅರಿವಿರಬೇಕು. ಮಕ್ಕಳ ಮೇಲಾಗುವ ಅಪರಾಧಗಳ ಪ್ರಕರಣಗಳನ್ನು ಗಮನಿಸಿ, ಜವಾಬ್ದಾರಿಯುತವಾಗಿ ತಮ್ಮ ಕರ್ತವ್ಯವನ್ನು ನಿರ್ವಹಿಸುವಲ್ಲಿ ಅರೆಕಾಲಿಕ ಕಾನೂನು ಸ್ವಯಂ ಸೇವಕರ ಪಾತ್ರ ಅತಿಮುಖ್ಯವಾಗಿದೆ ಎಂದು ಹೇಳಿದರು.

ಈ ಒಂದು ದಿನದ ಕಾರ್ಯಗಾರವನ್ನು ಸದುಪಯೋಗ ಪಡಿಸಿಕೊಂಡು ಜನರಲ್ಲಿ ಕಾನೂನಿನ ಅರಿವು ಮತ್ತು ನೆರವಿನ ಬಗ್ಗೆ ಜಾಗೃತಿ ಮೂಡಿಸುವ ಮೂಲಕ ಕೆಳವರ್ಗದಲ್ಲಿರುವವರನ್ನು ಮುಖ್ಯವಾಹಿನಿಗೆ ತರುವಲ್ಲಿ ಮತ್ತು ಜನರ ಸಮಸ್ಯೆಗಳಿಗೆ ಸ್ಪಂದಿಸಿ, ಅವರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ಸಂಪರ್ಕಿಸುವಂತೆ ಪ್ರೇರೇಪಿಸಿ, ಮನವರಿಕೆ ಮಾಡಬೇಕು ಎಂದು ತಿಳಿಸಿದರು.

ಸಂಪನ್ಮೂಲ ವ್ಯಕ್ತಿಗಳಾದ ಜಿಲ್ಲಾ ಕಾನೂನು ಸೇವೆ ಪ್ರಧಿಕಾರ, ಹಿರಿಯ ನ್ಯಾಯವಾದಿಗಳು ಮತ್ತು ಪ್ಯಾನಲ್ ವಕೀಲರಾದ, ಎಂ.ಜಿ.ಭೃಂಗಿಮಠ ಅವರು ಮಾತನಾಡಿ, ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಅರೆಕಾಲಿಕ ಸ್ವಯಂ ಸೇವಕರು ಗ್ರಾಮೀಣ ಪ್ರದೇಶದಲ್ಲಿ, ಹಿಂದುಳಿದ ಪ್ರದೇಶಗಳ ಜನರಿಗೆ ಕಾನೂನಿನ ಅರಿವು ಮೂಡಿಸಬೇಕು. ಕೇಂದ್ರ ಹಾಗೂ ರಾಜ್ಯ ಸರ್ಕಾರದ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ಪಾರದರ್ಶಕವಾಗಿ ತಲುಪುವಂತೆ ಕಾರ್ಯನಿರ್ವಹಿಸಬೇಕು. ರಾಷ್ಟ್ರಮಟ್ಟದಿಂದ ಹಿಡಿದು ತಾಲೂಕು ಮಟ್ಟದವರೆಗೆ ಕಾನೂನು ಸೇವಾ ಪ್ರಾಧಿಕಾರ, ಸಮಿತಿಗಳು ಕಾರ್ಯನಿರ್ವಹಿಸುತ್ತಿವೆ. ನ್ಯಾಯಾಲಯಗಳಲ್ಲಿ ಪ್ರಕರಣ ದಾಖಲಿಸಿ ಪ್ರಕರಣ ನಡೆಸಲು ಆರ್ಥಿಕ ತೊಂದರೆ ಅನುಭವಿಸುತ್ತಿರುವ ಜನರಿಗೆ ಉಚಿತ ಕಾನೂನು ಅರಿವು, ಸಲಹೆ ನೀಡುವುದರ ಜತೆಗೆ ಅವರ ಪ್ರಕರಣವನ್ನು ಉಚಿತವಾಗಿ ನಡೆಸಲು ಇರುವ ಪ್ರಾಧಿಕಾರದ ವ್ಯವಸ್ಥೆಯ ಬಗ್ಗೆ ಜನರಿಗೆ ಅರಿವು ಮೂಡಿಸಲಾಗುತ್ತಿದೆ ಎಂದು ಹೇಳಿದರು.

ಜಿಲ್ಲಾ, ಕಾನೂನು ಸೇವೆಗಳ ಪ್ರಾಧಿಕಾರ, ಮಾನ್ಯ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿ ಸಂತೋಷ್ ಎಸ್. ಕುಂದರ್ ಅವರು ಮಾತನಾಡಿ, ಪ್ರತಿಯೊಬ್ಬರಿಗೂ ಕಾನೂನು ಅರಿವು ಮೂಡಿಸುವುದು ಕಾನೂನು ಸೇವೆಗಳ ಸಮಿತಿ ಹಾಗೂ ಕಾನೂನು ಸೇವೆಗಳ ಪ್ರಾಧಿಕಾರದ ಮುಖ್ಯ ಗುರಿ ಮತ್ತು ಉದ್ದೇಶಗಳ ಬಗ್ಗೆ ವಿವರಿಸಿದರು. ಸಮಾಜದಲ್ಲಿರುವ ಪ್ರತಿಯೊಬ್ಬ ನಾಗರೀಕರಿಗೆ, ಸಾರ್ವಜನಿಕರಿಗೆ, ಕಾನೂನಿನ ಬಗ್ಗೆ ಹೆಚ್ಚಿನ ಅರಿವು ಮೂಡಿಸುವ ನಿಟ್ಟಿನಲ್ಲಿ ಅರೆಕಾಲಿಕ ಕಾನೂನು ಸ್ವಯಂ ಸೇವಕರು ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ವಿಶೇಷ ಉಪನ್ಯಾಸಕರಿಂದ ತರಬೇತಿ ಕಾರ್ಯಾಗಾರ: ಅರೆಕಾಲಿಕ ಕಾನೂನು ಸ್ವಯಂ ಸೇವಕರ ಒಂದು ದಿನದ ತರಬೇತಿ ಕಾರ್ಯಾಗಾರದಲ್ಲಿ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ಮಾನಸಿಕ ರೋಗ ತಜ್ಞ ವೈದ್ಯರಾದ ಡಾ. ಮಂಜುನಾಥ ಮಸಳಿ, ಸಿದ್ದೇಶ್ವರ ಕಾನೂನು ಮಹಾವಿದ್ಯಾಲಯ, ಉಪನ್ಯಾಸಕಿ ಸುಷ್ಮಾ ಎಸ್. ದೇಸಾಯಿ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಶ್ರೀಧರ ಕುಲಕರ್ಣಿ, ನ್ಯಾಯವಾದಿ ಕಾವ್ಯ ಎಮ್. ಬಿರಾದಾರ, ಹಿರಿಯ ನ್ಯಾಯವಾದಿ ಎಮ್. ಜಿ. ಮಠಪತಿ, ಅಂಜುಮನ್ ಕಾನೂನು ಮಹಾವಿದ್ಯಾಲಯ ಉಪನ್ಯಾಸಕ ಪ್ರದೀಪಕುಮಾರ ಈ. ಸಂಕದ ಅವರು ಕಾನೂನಿನ ಸೇವೆಗಳ ಪ್ರಾಧಿಕಾರ, ಕಾನೂನಿನ ಅಡಿಯಲ್ಲಿರುವ ಕಾಯ್ದೆ ಕಾನೂನುಗಳು ಹಾಗೂ ಕೌಟುಂಬಿಕ ಕಾನೂನು, ಮಗು ಮತ್ತು ಮನೋವಿಜ್ಞಾನ, ಸಂವಹನ ಕೌಶಲ್ಯಗಳು, ಅಪರಾಧ ನ್ಯಾಯ ವ್ಯವಸ್ಥೆ, ಹೀಗೆ ವಿವಿಧ ವಿಷಯಗಳ ಬಗ್ಗೆ ಉಪನ್ಯಾಸ ನೀಡಿ, ಚರ್ಚಿಸಿದರು.


ಜಿಲ್ಲಾ ವಕೀಲರ ಸಂಘ ಅಧ್ಯಕ್ಷರಾದ ಐ.ಜಿ.ಚಾಗಶೆಟ್ಟಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಕೆ.ಕೆ. ಚವ್ಹಾಣ ಸೇರಿದಂತೆ ಜಿಲ್ಲಾ ಮಟ್ಟದ ವಕೀಲರು, ನ್ಯಾಯವಾದಿಗಳು, ಕಾನೂನು ಪದವೀಧರ ವಿದ್ಯಾರ್ಥಿಗಳು, ಆಶಾಕಾರ್ಯಕರ್ತೆಯರು, ಶಿಕ್ಷಕರು ಉಪಸ್ಥಿತರಿದ್ದರು.

---

ಉದಯರಶ್ಮಿ ದಿನಪತ್ರಿಕೆ

## ಕಾವ್ಯರಶ್ಮಿ

– ಅರ್ಚನಾ. ಕೆ
("ನಮ್ಮ ಕಥಾ ಅರಮನೆ" ಬರಹಗಾರರು)



### ಹೃದಯ

ಕನಸಿನರಮನೆಯಲ್ಲಿ ನಿನ್ನದೇ ಕನವರಿಕೆ
ತಿಳಿಸಲಿ ಹೇಗೆ ಹೃದಯದ ಚಡಪಡಿಕೆ

ಹೃದಯ ಮಂದಿರದಿ ನಿನ್ನದೇ ಪ್ರೇಮಪೂಜೆ
ಎಂದಿಗೂ ನೀಡದಿರು ನಿನ್ನಗಲಿಕೆಯ ಸಜೆ

ಹೃದಯ ಮಿಡಿಯುವುದೇ ನಿನ್ನೊಲವಿಗಾಗಿ
ಅನುಗಾಲವು ಜತೆಯಿರು ಒಲವೇ ಉಸಿರಾಗಿ

ಉಸಿರು ನಿಂತರು ನಿನ್ನೆಸಿರಿನ ಮಿಡಿತ ನಿಲ್ಲದು
ಸಾವಿನಾಚೆಗೂ ಸಾಗುವ ಭಾವಬಂಧನವಿದು



---

# ವಾಡಿ ಬಳಿ ಆಟೋ-ಟ್ಯಾಂಕರ್ ಡಿಕ್ಕಿ; 6 ಮಂದಿ ದುರ್ಮರಣ

**ಉದಯರಶ್ಮಿ ನ್ಯೂಸ್**

ಕಲಬುರಗಿ: ಕಲಬುರಗಿ ಜಿಲ್ಲೆಯ ಚಿತ್ತಾಪುರ ತಾಲೂಕಿನ ವಾಡಿ ಸಮೀಪ ಆಟೋ ಮತ್ತು ಟ್ಯಾಂಕರ್ ಮುಖಾಮುಖಿ ಡಿಕ್ಕಿಯಾಗಿದ್ದು, ಭೀಕರ ಅಪಘಾತದಲ್ಲಿ ಇಬ್ಬರು ಮಕ್ಕಳು ಸೇರಿದಂತೆ ಒಂದೇ ಕುಟುಂಬದ 6 ಮಂದಿ ಮೃತಪಟ್ಟಿದ್ದಾರೆ.

ವಾಡಿಯಿಂದ ನಾಲವಾರ ಕಡೆ ತೆರಳುತ್ತಿದ್ದ ಆಟೋಗೆ ಹಲಕರ್ಟಾ ಬಳಿ ಟ್ಯಾಂಕರ್ ಡಿಕ್ಕಿ ಹೊಡೆದಿದೆ. ಆಟೋದಲ್ಲಿದ್ದ ಆರು ಮಂದಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ.


ಮೃತಪಟ್ಟವರೆಲ್ಲೂ ನಾಲವಾರ ಗ್ರಾಮದ ಒಂದೇ ಕುಟುಂಬದವರಾಗಿದ್ದಾರೆ. ಮೃತರನ್ನು ನಾಜ್ಮೀನ್ ಬೇಗಂ(28), ಬೀಬಿ ಫಾತಿಮಾ(12), ಅಬೂಬಕರ್(4), ಬೀಬಿ ಮರಿಯಮ್(3 ತಿಂಗಳು), ಮೊಹಮ್ಮದ್ ಪಾಷಾ(20) ಹಾಗೂ ಆಟೋ ಚಾಲಕ ಬಾಬಾ(35) ಎಂದು ಗುರುತಿಸಲಾಗಿದೆ ಮತ್ತು 10 ವರ್ಷದ ಬಾಲಕ ಮುಹಮ್ಮದ್ ಹುಸೇನ್ ಗಾಯಗೊಂಡಿದ್ದಾನೆ.

ಪಡಿತರ ಚೀಟಿಗೆ ಆಧಾರ್ ಲಿಂಕ್ ಮಾಡಿಸಲು ಚಿತ್ತಾಪುರಕ್ಕೆ ಹೋಗಿ ಮರಳಿ ನಾಲವಾರ ಗ್ರಾಮಕ್ಕೆ ಬರುತ್ತಿದ್ದಾಗ ಈ ದುರಂತ ಸಂಭವಿಸಿದೆ.

ಅಪಘಾತ ಸ್ಥಳಕ್ಕೆ ವಾಡಿ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

---

# ಕನ್ನಡ ಕಸ್ತೂರಿ



## ಭಾವರಶ್ಮಿ

– ಮಂಜುನಾಥ್ ಎಸ್ ಕೆ, ಬೆಂಗಳೂರು
("ನಮ್ಮ ಕಥಾ ಅರಮನೆ" ಬರಹಗಾರರು)

ಉದಯರಶ್ಮಿ ದಿನಪತ್ರಿಕೆ

ನವೆಂಬರ್ ಒಂದರಂದು ಕರ್ನಾಟಕದ, ಕನ್ನಡ ಜನರ ಪಾಲಿಗೆ ಒಂದು ವಿಶೇಷವಾದ ದಿನ. ಅಂದು ರಾಜ್ಯದ ಎಲ್ಲೆಡೆ ತುಂಬಾ ವಿಜೃಂಭಣೆಯಿಂದ , ಸಡಗರದಿಂದ ನಾಡ ಹಬ್ಬವನ್ನು ಆಚರಿಸಲಾಗುತ್ತದೆ. ಕನ್ನಡ

ನಾಡಹಬ್ಬ , ಕನ್ನಡಮ್ಮನ ಆಚರಣೆ ಎಂಬುದಾಗಿ ಸಹಾ ಆಚರಿಸುತ್ತೇವೆ. ಇತ್ತೀಚಿನ ದಿನಗಳಲ್ಲಿ ಈ ಹಬ್ಬವನ್ನು ನವಂಬರ್ ಮಾಸ ಪೂರ್ತಿ ಆಚರಣೆ ಮಾಡುವ ಸಂಪ್ರದಾಯ ಬೆಳೆದು ಬಂದಿದೆ. ಕವಿ ನಿಸ್ಸಾರ್ ಅಹಮದ್ ರವರು ಹೇಳಿರುವ ಹಾಗೆ, ಕನ್ನಡ ತಾಯಿಯ ಉತ್ಸವ ನಿತ್ಯವೂ ನಡೆಯಬೇಕು." ನಿತ್ಯೋತ್ಸವ ತಾಯಿ ನಿತ್ಯೋತ್ಸವ" ಎಂಬ ಪ್ರತಿಧ್ವನಿ ಎಲ್ಲಾ ಕಡೆ ಮೊಳಗ ಬೇಕು.

ನಮ್ಮ ನೆಚ್ಚಿನ ವಿಶ್ವಕವಿ ಕುವೆಂಪುರವರು ಹೇಳಿರುವ ಹಾಗೆ "ಕನ್ನಡವೆ ಸತ್ಯ ಕನ್ನಡವೇ ನಿತ್ಯ". ನಿತ್ಯವೂ ಆಕೆಯ ಉಪಾಸನೆ, ಅರ್ಚನೆ ನಡೆಯಲೇ ಬೇಕು. ಆಕೆ ನಿತ್ಯ ಸುಮಂಗಲಿ. ಅದಕ್ಕಾಗಿಯೇ ಎಂಬಂತೆ ನಮ್ಮ ಕನ್ನಡ ಧ್ವಜವನ್ನು ಕೆಂಪು ಹಳದಿ ಬಣ್ಣದಿಂದ ಮಾಡಲಾಗಿದೆ. ಅದು ಅರಿಶಿನ ಕುಂಕುಮದ ಸಂಕೇತವಾಗಿದೆ. ಅಷ್ಟೆ ಅಲ್ಲ ಕೆಂಪು ನಮ್ಮ ಪರಾಕ್ರಮವನ್ನು ಮತ್ತು ಹಳದಿ ನಮ್ಮ ಶಾಂತಿ ಮತ್ತು ಸ್ನೇಹ ಸಂಕೇತವನ್ನು ತಿಳಿಸುತ್ತೆ. ಇಂತಹ ಅರ್ಥಗರ್ಭಿತ ಭಾವುಟವನ್ನು ನಮಗೆ ಕೊಟ್ಟ ಮ. ರಾಮಮೂರ್ತಿಯವರನ್ನು ನಾವು ಸದಾ ನೆನೆಯ ಬೇಕು.

" ಕರ್ನಾಟಕ" ಎಂಬ ಹೆಸರೆ ಒಂದು ಧೀಮಂತ ಶಕ್ತಿ.

ಪ್ರಪ್ರಥಮವಾಗಿ 1956 ರ ನವೆಂಬರ್ ಒಂದರಂದು

ಈ ರಾಜ್ಯ ರಚನೆಯಾಯಿತು. ದಕ್ಷಿಣ ಭಾರತದ ಎಲ್ಲಾ ಕನ್ನಡ ಭಾಷೆ ಮಾತನಾಡುವ ಪ್ರದೇಶಗಳನ್ನು ವಿಲೀನಗೊಳಿಸಿ ಮೈಸೂರು ರಾಜ್ಯವನ್ನು ಸ್ಥಾಪನೆ ಮಾಡಿದ್ದು ಈಗ ಇತಿಹಾಸ. ಇದರಲ್ಲಿ ರಾಜ್ಯದ ಮೂರು ಮುಖ್ಯ ಪ್ರದೇಶಗಳಾದ ಮೈಸೂರು ಪ್ರದೇಶ, ಉತ್ತರ ಕರ್ನಾಟಕ ಹಾಗು ಮಲೆನಾಡಿನ ಪ್ರದೇಶಗಳು ಒಳಗೊಂಡಿದ್ದವು. ಈ ಕಾರ್ಯವನ್ನು ಸಾಕಾರಗೊಳಿಸಲು ಕರ್ನಾಟಕ ಏಕೀಕರಣ ಚಳುವಳಿ ಮಾಡಲು 1905 ರಲ್ಲೇ ಪ್ರಾರಂಭ ಮಾಡಿದವರು ಆಲೂರು ವೆಂಕಟರಾಯರು. ರಾಜ್ಯವನ್ನು ಏಕೀಕರಿಸುವ ಕನಸ್ಸನ್ನು ಪ್ರಥಮವಾಗಿ ಕಂಡ ಮಹಾನ್ ವ್ಯಕ್ತಿ ಅವರು.

ಉದಯವಾಗಲಿ ನಮ್ಮ ಚೆಲುವ ಕನ್ನಡ ನಾಡು ಎಂಬ ಕಹಳೆಯನ್ನು ಹುಯಿಲ್ಗೋಳ್ ನಾರಾಯಣ ರಾವ್ ಕನ್ನಡದ ಕಿಚ್ಚನ್ನು ಹಚ್ಚಿದ ಮತ್ತೊಬ್ಬ ಮಹಾನ್ ವ್ಯಕ್ತಿ. ಇವರಿಬ್ಬರೂ ಪ್ರಾತಃಸ್ಮರಣೀಯರು. .


ಕನ್ನಡ ಭಾಷೆ ಮಾಡನಾಡುವ ಪ್ರದೇಶಗಳನ್ನು ಒಂದು ಮಾಡಿ 1956 ನವಂಬರ್ ನಲ್ಲಿ ಮೈಸೂರು ರಾಜ್ಯ ಸ್ಥಾಪನೆ ಆದಾಗ ಅದು ಕರ್ನಾಟಕದ ಸಮಗ್ರ

ಚಿತ್ರಣವನ್ನು ಒಳಗೊಂಡಿಲ್ಲವಾದ್ದರಿಂದ ಮಲೆನಾಡು ಮತ್ತು ಉತ್ತರ ಕರ್ನಾಟಕ ಭಾಗದವರು ಮೈಸೂರು ಎಂಬ ಹೆಸರಿಗೆ ಒಲವು ತೋರಲ್ಲಿಲ್ಲ. ಅವರ ತರ್ಕಕ್ಕೆ ಅನುಗುಣವಾಗಿ ಕನ್ನಡ ಭಾಷೆ ಮಾತನಾಡುವ ಪ್ರದೇಶಕ್ಕೆ

" ಕರ್ನಾಟಕ" ಎಂಬ ಮರು ನಾಮಕರಣವನ್ನು ನವಂಬರ್ 1, 1973 ರಲ್ಲಿ ಅಂದಿನ ಧೀಮಂತ ನಾಯಕ ಹಾಗೂ ರಾಜ್ಯದ ಜನಪ್ರಿಯ ಮುಖ್ಯ ಮಂತ್ರಿಗಳಾಗಿದ್ದ ದಿವಂಗತ ದೇವರಾಜ ಅರಸು ಅವರು ಮಹತ್ವದ ನಿರ್ಧಾರ ಪ್ರಕಟಿಸಿ ಈ ರಾಜ್ಯದ ಹೆಸರನ್ನು " ಕರ್ನಾಟಕ " ಎಂದು ಬದಲಾಯಿಸಿದರು. ಅಂದಿನಿಂದ ಈ ರಾಜ್ಯ ಸಮಗ್ರ ಕರ್ನಾಟಕವಾಗಿ ಎಲ್ಲಾ ರೀತಿಯಲ್ಲೂ ಸಂಪತ್ ಭರಿತವಾಗಿ ಕಂಗೊಳಿಸುತ್ತಾ ಇದೆ.

ಹಾಗಾಗಿಯೇ ಕುವೆಂಪು ಅವರು ಹೇಳಿರುವ ರೀತಿ

**ಭಾರತ ಜನನಿಯ ತನುಜಾತೆ**



**ಜಯಹೇ ಕರ್ನಾಟಕ ಮಾತೆ**

ಎನ್ನುವುದು ನಿಜಕ್ಕೂ ಅನ್ವರ್ಥ ಆಗಿದೆ.

ಇಂದಿಗೆ ನಮ್ಮ ರಾಜ್ಯದ ಹೆಸರು "ಕರ್ನಾಟಕ " ಎಂದು ಮರುನಾಮಕರಣ ಆಗಿ ಐವತ್ತು ವರ್ಷಗಳು ತುಂಬಿ ಸ್ವರ್ಣ ಮಹೋತ್ಸವದ ಸಂಬ್ರಮದಲ್ಲಿ ಇದ್ದೇವೆ. ನವೆಂಬರ್ ಒಂದರಿಂದ ಹತ್ತು ದಿನಗಳ ಕಾಲ ರಾಜ್ಯದಲ್ಲಿ ಈ ಪ್ರಯುಕ್ತ ವಿವಿಧ ಸಾಂಸ್ಕೃತಿಕ ಚಟುವಟಿಕೆಗಳನ್ನು ಕರ್ನಾಟಕ ಸರಕಾರ , ಅನೇಕ ಸಂಘ ಸಂಸ್ಥೆಗಳು, ಕಚೇರಿಗಳಲ್ಲಿ ಅಷ್ಟೇ ಏಕೆ ನಮ್ಮ ಕಥಾ ಅರಮನೆಯಲ್ಲಿ ಸಹಾ ಹಮ್ಮಿಕೊಳ್ಳಲಾಗಿದೆ.

ಈ ಸಂದರ್ಭದಲ್ಲಿ ಕನ್ನಡ ಭಾಷೆಯ ಬೆಳಸುವ ಉಳಿಸುವ ಬಗ್ಗೆ ನನ್ನ ಅನಿಸಿಕೆಗಳು.

ನಮ್ಮ ಕನ್ನಡನಾಡು ಶ್ರೀ ಗಂಧದ ಬೀಡು. ಕರುನಾಡು.ಕನ್ನಡಾಂಬೆಯ ನಾಡು. ಹಚ್ಚ ಹಸಿರಿನ , ಸುಂದರ ಬೆಟ್ಟ ಗುಡ್ಡಗಳ, ನದಿಗಳು ಹರಿಯುವ, ಕಲೆ ಸಾಹಿತ್ಯ ಸಂಸ್ಕೃತಿ ಸಂಗೀತದ ತವರು ಮನೆ.

ಈ ನಾಡು ಅನೇಕ ಸಾಧು ಸಂತರು, ದಾಸ ವರೇಣ್ಯರು ,

ಶಿವಶರಣರು, ಕವಿಗಳು, ರಾಜಾಧಿ ರಾಜರಗಳು, ರಾಜಕೀಯ ಮುಸ್ತದ್ಧಿಗಳು, ಹೆಸರಾಂತ ಕಲಾವಿದರು, ಕ್ರೀಡಾಪಟುಗಳು, ಕೈಗಾರಿಕಾ ಉದ್ಯಮಿಗಳು, ಸಮಾಜ ಸೇವಾ ಧುರೀಣರು, ಮಠಾಧಿಪತಿಗಳು , ಸುಪ್ರಸಿದ್ಧ ವಿಶ್ವ ವಿದ್ಯಾನಿಲಯಗಳು, ಶಿಕ್ಷಣ ತಜ್ಞರು, ಬ್ಯಾಂಕಿಂಗ್ ಕ್ಷೇತ್ರದಲ್ಲಿ ಹೆಸರು ಮಾಡಿದವರು , ಹೆಸರಾಂತ ವೈದ್ಯಾಧಿಕಾರಿಗಳು ವಿಶ್ವ ಕಂಡ ಶ್ರೇಷ್ಠ ಇಂಜಿನಿಯರ್ ಗಳು ಎಲ್ಲಕ್ಕಿಂತ ಮಿಗಿಲಾಗಿ " ಸಹೃದಯ ಕನ್ನಡಿಗರನ್ನು" ಕಂಡ ನಾಡು. ಕನ್ನಡಿಗರು ಸ್ನೇಹಪರರು , ಪ್ರೀತಿಯ ಜೀವಿಗಳು,ಉದಾರವಂತರು , ಎಲ್ಲಾ ಜನ ಸಾಮಾನ್ಯರ ಜೊತೆ ಜೊತೆಗೆ ಬೆರೆತು ಸುಖ ಸಂತೋಷದ ಬಾಳು ನಡೆಸುವವರು . ಹಾಗಾಗಿ ಕನ್ನಡ ನಾಡು ಶಾಂತಿಯ ತೋಟ ; ಹೃದಯ ರಸಿಕರ ಕಂಗಳ ಸೆಳೆಯುವ ನೋಟ ಇಲ್ಲಿದೆ ಎಂದರೆ ತಪ್ಪಾಗಲಾರದು.

ನಮ್ಮ ಕನ್ನಡ ಭಾಷೆ ಅತ್ಯಂತ ಶ್ರೀಮಂತ ಭಾಷೆ. ಸಾವಿರಾರು ವರ್ಷಗಳ ಸಾಹಿತ್ಯ ಪರಂಪರೆ ಕನ್ನಡಕ್ಕಿದೆ. ಕನ್ನಡ ಭಾಷೆಯ ಸೌಂದರ್ಯಕ್ಕೆ ಮತ್ತು ಹಿರಿಮೆಗೆ ಹೆಗ್ಗಳಿಕೆ ಎಂದರೆ ಅತಿ ಹೆಚ್ಚು ಬಳಸುವ ಭಾಷೆ ಹಿಂದಿಯ ನಂತರ ಅತೀ ಹೆಚ್ಚು ಜ್ಞಾನಪೀಠ ಪ್ರಶಸ್ತಿಯನ್ನು ತನ್ನ ಮಡಿಲಿಗೆ ಹಾಕಿ ಕೊಂಡಿರುವುದು. ಇದುವರೆಗೆ 8 ಕನ್ನಡ ಸಾಹಿತಿಗಳು ಈ ಪ್ರಶಸ್ತಿಯನ್ನು ಪಡೆದು ಕನ್ನಡ ಭಾಷೆಯನ್ನು ಶ್ರೀಮಂತ ಗೊಳಿಸಿದ್ದಾರೆ.

ಎರಡನೆ ಅತ್ಯಂತ ಶ್ರೇಷ್ಠ ಭಾಷಾ ಸನ್ಮಾನವಾದ ಕೇಂದ್ರ ಸಾಹಿತ್ಯಅಕಾಡೆಮಿಯ ಪ್ರಶಸ್ತಿ ಕೂಡಾ ಸುಮಾರು 64 ಕನ್ನಡ ಸಾಹಿತಿಗಳಿಗೆ ಲಭಿಸಿದೆ. ಇದು ನಿಜಕ್ಕೂ ಗೌರವದ ಮತ್ತು ಕನ್ನಡಿಗರಿಗೆ ಗರ್ವದ ವಿಷಯ ಸಹಾ.




ಆದರೆ ಇಂದು ನಮ್ಮನ್ನೆಲ್ಲಾ ಕಾಡುತ್ತಿರುವ ಪ್ರಶ್ನೆ ಇಷ್ಟೆಲ್ಲಾ ಶ್ರೀಮಂತ ಭಾಷೆ , ನಾಡು ನುಡಿ ಕಲೆ ಸಾಹಿತ್ಯ ಸಂಸ್ಕೃತಿ ಪ್ರಸಿದ್ಧವಾಗಿದ್ದರೂ ನಮ್ಮ ಭಾಷೆ ಯಾಕೆ "ನಲುಗಿದೆ" ಅಥವಾ ಬಸವಳಿಯುತ್ತಾ ಇದೆ. ಯಾಕೆ ಅಗ್ಗಾಗ ಕನ್ನ

" ಉಳಿಸಿ ಬೆಳಸಿ " ಅನ್ನುವ ಕೂಗು ಕೇಳುತ್ತಾ ಇರುತ್ತೆ.

ವಿಚಾರ ಮಾಡುತ್ತ ನೋಡಿದರೆ ಅನಿಸುವುದು ಭಾಷೆ ಬಡವಾಗಿಲ್ಲ; ಆದರೆ ಅದನ್ನು ಬಳಸುವ ಜನರ ಇಚ್ಛಾಶಕ್ತಿ ಕಡಿಮೆ ಆಗುತ್ತಿದಿಯಾ??? ಎನ್ನುವ ಪ್ರಶ್ನೆ ಉದ್ಭವವಾಗುತ್ತದೆ. ಇಂದಿನ ಯುವ ಪೀಳಿಗೆ ಭಾಷೆಯ ಬಗ್ಗೆ ಸಂಕೀರ್ಣತಗೆ ಒಳಗಾಗಿದ್ದಾರ ಎಂದು?? ನಾವು ಇಂಗ್ಲೀಷ್ ಕಲಿಯದಿದ್ದರೆ ನಮ್ಮ ಭವಿಷ್ಯ ಹೇಗೆ ಎಂಬ ಜಿಜ್ಞಾಸೆ ಇದೆಯಾ???

ಇಂದಿನ ಸ್ಪರ್ಧಾತ್ಮಕ ಕಾಲದಲ್ಲಿ , ದೇಶವು ಕಂಡಿರುವ ಮತ್ತು ಕಾಣುತ್ತಿರುವ ಆಧುನೀಕರಣ, ಜಾಗತೀಕರಣ ಗಣಕೀಕರಣ, ಧ್ರುವೀಕರಣ ಮುಂತಾದ ಮಾನದಂಡಗಳಲ್ಲಿ ಅನ್ಯ ಭಾಷೆಗಳ ಕಲಿಕೆ, ಪಾಂಡಿತ್ಯ ಜ್ಞಾನ ಖಂಡಿತಾ ಬೇಕು. ಅದು ನಮ್ಮ ಓದುವಿಕೆ, ಕಲಿಯುವಿಕೆಗೆ ಮತ್ತು

ಗಳಿಕೆಯ ಮಾರ್ಗಕ್ಕೆ ಉಪಯೋಗ ಮಾಡಿಕೊಳ್ಳೋಣ.

ಆದರೆ ನಮ್ಮ ಮನೆಯಲ್ಲಿ ನಮ್ಮ ಜನರ ಮಧ್ಯೆ ನಮ್ಮ ಮನದ ಮಾತು ಕನ್ನಡ ಆಗಿರಲಿ ಎನ್ನುವುದು ನನ್ನ ಮನದಾಳದ ಮಾತು.

ನಾವು ಯಾವುದೆ ಭಾಷೆಯ ದ್ವೇಷಿಗಳು ಆಗುವುದು ಬೇಡ. ಆದರೆ ಕನ್ನಡ ಭಾಷೆಯ ಪ್ರೇಮಿಗಳು ಆಗೋಣ. ಅನ್ಯ ಭಾಷೆಗಳು, ನಮ್ಮ ಮನೆಗೆ ಗಾಳಿ ಬೆಳಕು ಬರಲು ಇಟ್ಟಿರುವ ಕಿಟಕಿ ಬಾಗಿಲುಗಳು ಆಗಿರ ಬೇಕೆ ವಿನಃ ಮನೆಯ ಮುಖ್ಯದ್ವಾರ ಆಗಿರಬಾರದು. ನಮ್ಮ ಕುಟುಂಬದ ಸದಸ್ಯರ ಮಧ್ಯೆ, ಸ್ನೇಹಿತರ ಮಧ್ಯೆ ಕನ್ನಡ ಭಾಷೆಯ ಸಂಪರ್ಕ ಸೇತುವೆ ಇರಬೇಕು. ಕನ್ನಡಕ್ಕೆ ಹೋರಾಡು ಕನ್ನಡದ ಕಂದ, ಕನ್ನಡವ ಕಾಪಾಡು ನನ್ನ ಆನಂದ ಸ್ಥಿತಿ ಬರಬಾರದು.

ನಾವು ಕೇವಲ ನವೆಂಬರ್ ತಿಂಗಳ ಕನ್ನಡಿಗರು ಆಗದೆ, ಕನ್ನಡ ನಾಡಿನ ಜವಾಬ್ದಾರಿಯುತ ಪ್ರಜೆಯಾಗಿ ಕನ್ನಡದಲ್ಲೇ ಆದಷ್ಟೂ ಮಾತನಾಡುತ್ತಾ, ಕನ್ನಡ ಪತ್ರಿಕೆ, ಪುಸ್ತಕ ಓದುತ್ತಾ ಕನ್ನಡದ ಭಾಷಾ ಪ್ರಯೋಗವನ್ನು ಮಾಡಬೇಕು. ಕನ್ನಡವನ್ನು ಬಳಸುತ್ತಾ ಕಲಿಸುತ್ತಾ ಕನ್ನಡ ನಾಡು ನುಡಿ ಸಂಸ್ಕೃತಿ ಪರಂಪರೆ ಉಳಿಸಲು ಪ್ರಾಮಾಣಿಕ ಪ್ರಯತ್ನ ಪ್ರತೀ ಕನ್ನಡಿಗರು ಮಾಡಬೇಕು.

**ಎಲ್ಲಾದರೂ ಇರೋಣ**
**ಎಂತಾದರೂ ಇರೋಣ**

**ಎಂದೆಂದಿಗೂ ನಾವು**
**ಕನ್ನಡದವರಾಗಿ ಇರೋಣ .**

**ಕನ್ನಡವೇ ಸತ್ಯ ಕನ್ನಡವೇ ನಿತ್ಯ.**